ಸಂಪುಟ : 10 ಸಂಚಿಕೆ: 294 ಪುಟ : 4+2 ಬೆಲೆ: 3.00 ಬುಧವಾರ ಜನವರಿ 07 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 294 Pages : 4+2 Price : 3.00 Wednesday January 07 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಮರಕ್ಕೆ ಬೊಲೆರೊ ವಾಹನ ಡಿಕ್ಕಿ; ನಾಲ್ವರು ಕಾರ್ಮಿಕರು ಸಾವು



■ ವಿಜಯಸಾಕ್ಷಿ ಸುದ್ದಿ, ಚಿತ್ರದುರ್ಗ

ಜಿಲ್ಲೆಯ ಹೊಳಲ್ಕೆರೆ ತಾಲೂಕಿನ ಅಂದನೂರು ಬಳಿ ಮರಕ್ಕೆ ಬೊಲೆರೊ ವಾಹನ ಡಿಕ್ಕಿ ಹೊಡೆದ ಪರಿಣಾಮ ನಾಲ್ವರು ಕಾರ್ಮಿಕರು ಸಾವನ್ನಪ್ಪಿರುವಂತಹ ಘಟನೆ ಜರುಗಿದೆ.

ಮೃತರನ್ನು ಕಿರಣ್(25), ಅರುಣ್(32), ಹನುಮಂತ(32) ಮತ್ತು ಗಿರಿರಾಜ್(46) ಎಂದು ಗುರುತಿಸಲಾಗಿದೆ. ಇನ್ನುಳಿದ ನಾಲ್ವರು ಕಾರ್ಮಿಕರಿಗೆ ಗಾಯಗಳಾಗಿದ್ದು, ದಾವಣಗೆರೆ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದೆ. ದಾವಣಗೆರೆ ತಾಲೂಕಿನ ಅಣಜಿ ಗ್ರಾಮದಲ್ಲಿ ಅಡಕೆ ಲೋಡ್ ಇಳಿಸಿ ಕಾರ್ಮಿಕರು ವಾಪಸ್ ಬರುವಾಗ ಅಪಘಾತ ಸಂಭವಿಸಿದೆ. ದುರಂತದಲ್ಲಿ ಇಬ್ಬರು ಕಾರ್ಮಿಕರು ಸ್ಥಳದಲ್ಲೇ ಸಾವನ್ನಪ್ಪಿದ್ದು, ದಾವಣಗೆರೆ ಆಸ್ಪತ್ರೆಯಲ್ಲಿ ಮತ್ತಿಬ್ಬರು ಕಾರ್ಮಿಕರು ಕೊನೆಯುಸಿರೆಳೆದಿದ್ದಾರೆ. ಮೃತ ಕಾರ್ಮಿಕರು ಕಲ್ಲವ್ವ ನಾಗತಿಹಳ್ಳಿ ಗ್ರಾಮದವರು ಎನ್ನಲಾಗಿದೆ.

ಚಿಕ್ಕಜಾಜೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

### ಅಂಜುಮನ್-ಎ-ಇಸ್ಲಾಂ ಪಬ್ಲಿಕ್ ಶಾಲೆಯ ವಾರ್ಷಿಕ ವಿಜ್ಞಾನ ವಸ್ತುಪ್ರದರ್ಶನ ಉದ್ಘಾಟಿಸಿದ ಸೈಯದ್ ಅಜಂಪೀರ ಖಾದ್ರಿ

# ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಕೊಡಿಸಿ

■ ವಿಜಯಸಾಕ್ಷಿ ಸುದ್ದಿ, ರೋಣ

ದೇಶದಲ್ಲಿ ಮುಸ್ಲಿಮರು ಶಿಕ್ಷಣ ಕ್ಷೇತ್ರದಲ್ಲಿ ಬಹಳಷ್ಟು ಹಿಂದಿದ್ದಾರೆ. ಹೀಗಾಗಿ ಮುಸ್ಲಿಮರು ಹೊತ್ತಿನ ಊಟ ಬಿಟ್ಟರೂ ಚಿಂತೆಯಿಲ್ಲ, ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಕೊಡಿಸುವಲ್ಲಿ ಹಿಂದೆ ಬೀಳಬಾರದು ಎಂದು ಮಾಜಿ ಶಾಸಕ ಹಾಗೂ ಹುಬ್ಬಳ್ಳಿ ವಿದ್ಯುತ್ ಪ್ರಸರಣ ನಿಗಮದ ಅಧ್ಯಕ್ಷ ಸೈಯದ್ ಅಜಂಪೀರ ಖಾದ್ರಿ ಹೇಳಿದರು.

ಅವರು ಮಂಗಳವಾರ ಪಟ್ಟಣದ ಅಂಜುಮನ್-ಎ-ಇಸ್ಲಾಂ ಸಂಸ್ಥೆಯ ಪಬ್ಲಿಕ್ ಶಾಲೆಯ ವಾರ್ಷಿಕ ವಿಜ್ಞಾನ ವಸ್ತು ಪ್ರದರ್ಶನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.



ನಮ್ಮ ಮಕ್ಕಳು ಅಕ್ಷರ ಜ್ಞಾನದಿಂದ ವಂಚಿತರಾಗದಂತೆ ಸಮುದಾಯದ ಪಾಲಕರು ಎಚ್ಚರಿಕೆ ವಹಿಸಬೇಕು. ಮಕ್ಕಳ ಉನ್ನತಿ ಮತ್ತು ಸಮಾಜದ ಪ್ರಗತಿ ಶಿಕ್ಷಣದಿಂದ ಮಾತ್ರ ಎನ್ನುವುದನ್ನು ನಾವೆಲ್ಲರೂ ಅರಿಯಬೇಕಿದೆ. ಸಮಾಜದ ಬಂಧುಗಳು ಬಡತನದಿಂದ ಹೊರಬರಲು ಶಿಕ್ಷಣ ಅವಶ್ಯಕವಾಗಿದ್ದು, ಈ ನಿಟ್ಟಿನಲ್ಲಿ ಸಮಾಜ ಯೋಚಿಸಬೇಕಿದೆ. ಇಂದಿನ ಮಕ್ಕಳು ನಾಳೆಯ ಉತ್ತಮ ಪ್ರಜೆಗಳಾಗಲಿದ್ದಾರೆ ಎಂದರು.

ಸಮಾಜದ ಮಕ್ಕಳಲ್ಲಿ ಮಾನವೀಯ ಮೌಲ್ಯಗಳನ್ನು ಬೆಳೆಸುವುದು ಶಿಕ್ಷಕರ ಹಾಗೂ ಪಾಲಕರ ಆದ್ಯ ಕರ್ತವ್ಯ. ಮಕ್ಕಳಿಗೆ ಒಳ್ಳೆಯ ಹಾಗೂ ಕೆಟ್ಟ ಸಂಗತಿಗಳ ಬಗ್ಗೆ ತಿಳಿಸುವುದು ಕೂಡ ಇಂದಿನ ದಿನಮಾನಕ್ಕೆ ಅಗತ್ಯವಾಗಿದೆ. ನಾವು ಬಡತನದಲ್ಲಿ ಹುಟ್ಟಿರಬಹುದು. ಆದರೆ ನಮ್ಮ ಮಕ್ಕಳು ನಮ್ಮಂತೆ ಬಡವರಾಗಿ ಉಳಿಯಬಾರದು ಎಂಬ ಚಿಂತನೆ ಪಾಲಕರಲ್ಲಿ ಬರಬೇಕು. ಮುಸ್ಲಿಮರಲ್ಲಿ ದಾನ ಮಾಡುವುದು ಕಡ್ಡಾಯ. ಹಾಗೆಯೇ, ಮಕ್ಕಳಿಗೆ ಅಕ್ಷರದ ದಾನ ಮಾಡುವುದು ಕೂಡ ಕಡ್ಡಾಯ. ಅಂದಾಗ ಮಾತ್ರ ಓರ್ವ ಮುಸ್ಲಿಮನಿಗೆ ಸ್ವರ್ಗ ಸಿಗಲು ಸಾಧ್ಯ ಎಂಬ ಸತ್ಯವನ್ನು ನಾವು ತಿಳಿದುಕೊಳ್ಳಬೇಕು. ಸಮಾಜ ಮತ್ತಷ್ಟು ಪ್ರಗತಿಯತ್ತ ಸಾಗಲು ಅಕ್ಷರ ಜ್ಞಾನ ಬೇಕು. ಅಂದಾಗ ಸಮಾಜದ ಮಕ್ಕಳು ಉನ್ನತ ಹುದ್ದೆಗಳನ್ನು ಪಡೆಯಲು ಸಾಧ್ಯವಾಗುತ್ತದೆ ಎಂದರು.

ತಾಲೂಕಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ ಪಾಟೀಲ ಮಾತನಾಡಿ, ಸಾಚಾರ್ ವರದಿ ಪ್ರಕಾರ ಮುಸ್ಲಿಂ ಬಂಧುಗಳು ಶಿಕ್ಷಣದಿಂದ ತೀರಾ ಹಿಂದುಳಿದಿರುವುದು ಕಂಡು ಬರುತ್ತದೆ. ಹೀಗಾಗಿ ▸▸3ನೇ ಪುಟಕ್ಕೆ

> ಶಾಸಕ ಜಿ.ಎಸ್. ಪಾಟೀಲ ರಾಜ್ಯ ಕಂಡ ಅಪ್ರತಿಮ ನಾಯಕ. ಅವರ ಸೇವೆ ಸ್ಮರಣೀಯ. ಪಟ್ಟಣ ಸೇರಿದಂತೆ ಮತಕ್ಷೇತ್ರದ ಮುಸ್ಲಿಂ ಮಕ್ಕಳು ಇಂದು ವಿದ್ಯಾವಂತರಾಗಲು ಅವರು ಕೊಟ್ಟ ಕೊಡುಗೆ ಕಾರಣ ಎಂದು ಸಮಾಜದ ಹಿರಿಯರು ನನಗೆ ತಿಳಿಸಿದ್ದು ನನಗೆ ಬಹಳ ಸಂತಸ ತಂದಿದೆ.
>
> **– ಸೈಯದ್ ಅಜಂಪೀರ ಖಾದ್ರಿ.**
> ಅಧ್ಯಕ್ಷರು, ಹುಬ್ಬಳ್ಳಿ ವಿದ್ಯುತ್ ಪ್ರಸರಣ ನಿಗಮ.

### ಸಂಸದ ಬಸವರಾಜ ಬೊಮ್ಮಾಯಿ ನೇತೃತ್ವದಲ್ಲಿ ದಿಶಾ ಸಭೆ

# ಜನರ ಮೂಗಿಗೆ ತುಪ್ಪ ಒರೆಸದಿರಿ!

■ ವಿಜಯಸಾಕ್ಷಿ ಸುದ್ದಿ, ಗದಗ

ಅವಳಿ ನಗರದ ಕುಡಿಯುವ ನೀರಿನ ಸಮಸ್ಯೆ ಸೇರಿದಂತೆ ವಿವಿಧ ಜನಪರ ವಿಚಾರಗಳಲ್ಲಿ ಅಧಿಕಾರಿಗಳು ಜನರ ಮೂಗಿಗೆ ತುಪ್ಪ ಒರೆಸುವ ಕ್ರಮವಾಗಬಾರದು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಹಾಲಿ ಸಂಸದರಾದ ಬಸವರಾಜ ಬೊಮ್ಮಾಯಿ ಅವರು ಅಧಿಕಾರಿಗಳನ್ನು ಎಚ್ಚರಿಸಿದರು.




ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ನಡೆದ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಮೇಲ್ವಿಚಾರಣಾ ಸಮಿತಿ (ದಿಶಾ) ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕುಡಿಯುವ ನೀರಿನ ವಿಷಯದಲ್ಲಿ ಯಾವುದೇ ರೀತಿಯ ತಾರತಮ್ಯ ಸಲ್ಲದು ಎಂದು ಸ್ಪಷ್ಟಪಡಿಸಿದರು.

ಜಲ ಜೀವನ್ ಮಿಷನ್ (ಎಎಂ) ಯೋಜನೆಯಡಿ ಮನೆ-ಮನೆಗೆ ನೀರು ತಲುಪುವಂತೆ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು. ಅಧಿಕಾರಿಗಳು ಸಭೆಗೆ ತಪ್ಪು ಮಾಹಿತಿ ನೀಡದೇ, ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಬೇಕು ಎಂದು ಸಂಸದರು ಸೂಚಿಸಿದರು.

ಕೇಂದ್ರ ಸರ್ಕಾರವು ಗ್ರಾಮೀಣಾಭಿವೃದ್ಧಿ, ಆರೋಗ್ಯ, ಶಿಕ್ಷಣ, ಕುಡಿಯುವ ನೀರು, ರಸ್ತೆ, ವಸತಿ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಜನಹಿತದ ಹಲವಾರು ಯೋಜನೆಗಳನ್ನು ಜಾರಿಗೊಳಿಸಿದೆ. ಈ ಯೋಜನೆಗಳ ಪ್ರಯೋಜನ ಅರ್ಹ ಫಲಾನುಭವಿಗಳಿಗೆ ತಲುಪುವಲ್ಲಿ ಯಾವುದೇ ವಿಳಂಬ, ಅಸಡ್ಡೆಗೆ ಅವಕಾಶ ನೀಡಬಾರದು ಎಂದು ಸಂಸದರು ತಿಳಿಸಿದರು.

ಶಾಲೆ ಎಂಬುದು ಪವಿತ್ರ ಸ್ಥಳ. ಶಾಲೆಗಳಿಗೆ ಕಾಪೌಂಡ್ ನಿರ್ಮಿಸಿ ಅಲ್ಲಿ ನಡೆಯುವ ಅನೈತಿಕ ಚಟುವಟಿಕೆಗಳನ್ನು ತಡೆಗಟ್ಟಬೇಕು. ಈ ಕಾರ್ಯಕ್ಕೆ ಗ್ರಾ.ಪಂ ಹಾಗೂ ಪೊಲೀಸ್ ಇಲಾಖೆಗಳ ಸಹಯೋಗ ಪಡೆಯುವಂತೆ ಸಂಸದ ಬಸವರಾಜ ಬೊಮ್ಮಾಯಿ ಸೂಚಿಸಿದರು.

ಶಾಸಕ ಸಿ.ಸಿ. ಪಾಟೀಲ ಮಾತನಾಡಿ, ಜಿಲ್ಲೆಯಲ್ಲಿ ಕಳ್ಳಸಂತೆಯಲ್ಲಿ ಅನ್ನಭಾಗ್ಯದ ಅಕ್ಕಿ ಮಾರಾಟವಾಗದಂತೆ ನೋಡಿಕೊಳ್ಳಬೇಕು. ಸಾಮಾಜಿಕ ಭದ್ರತಾ ಯೋಜನೆಗೆ ಸಂಬಂಧಿಸಿದಂತೆ ರಾಜ್ಯ ಹಾಗೂ ಕೇಂದ್ರ ಸರಕಾರದ ಯೋಜನೆಗಳ ಫಲಾನುಭವಿಗಳ ಪಟ್ಟಿ ಒದಗಿಸಬೇಕು. ಪ್ರಧಾನ ಮಂತ್ರಿ ಉಜ್ವಲ ಯೋಜನೆಯ ಕುರಿತು ವ್ಯಾಪಕ ಪ್ರಚಾರ ಕೈಗೊಳ್ಳಬೇಕು. ಜಿಲ್ಲಾ ಮಟ್ಟದ ಅಧಿಕಾರಿಗಳು ತಮ್ಮ ತಮ್ಮ ಇಲಾಖೆಯ ಸಂಬಂದಿತ ಮಾಹಿತಿಯನ್ನು ಸಭೆಗೆ ತರಬೇಕು ಎಂದರು.

ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಜಿಲ್ಲೆಯ ಕೆಲವೊಂದು ಶಾಲಾ ಆವರಣಗಳಲ್ಲಿ ಸಾರಾಯಿ ಬಾಟಲಿಗಳು ಬಿದ್ದಿರುವುದು ಕಂಡುಬರುತ್ತಿವೆ. ಎಲ್ಲ ಶಾಲೆಗಳಲ್ಲಿ ಸಿಸಿ ಟಿವಿ ಅಳವಡಿಸಲು ಕ್ರಮ ವಹಿಸಬೇಕು ಎಂದರು.

ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಜೆಜೆಎಂ ಅಡಿ ಕೈಗೊಂಡ ಕಾಮಗಾರಿಗಳು ಪೂರ್ಣಗೊಳ್ಳಬೇಕಾದರೆ ಗ್ರಾಮದ ಪ್ರತಿ ಮನೆಗೂ ನೀರು ತಲುಪಬೇಕು. ಆದರೆ ಈವರೆಗೂ ಕೇವಲ ಪೈಪ್‌ಲೈನ್ ಅಳವಡಿಕೆ ಸೇರಿದಂತೆ ಇತರೆ ಕಾರ್ಯಗಳನ್ನಷ್ಟೇ ಮಾಡಿದ್ದು, ಜೆಜೆಂ ಯೋಜನೆ ಸಂಪೂರ್ಣ ಯಶಸ್ವಿಯಾಗಿಲ್ಲ. ನೀರು ಮನೆ ಬಾಗಿಲಿಗೆ ತಲುಪಿದಾಗಷ್ಟೇ ಯೋಜನೆಯ ಸದ್ಬಳಕೆಯಾದಂತಾಗುತ್ತದೆ ಎಂದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಿಬ್ಬಂದಿಗಳು ಹಾಜರಿದ್ದರು.

> ಅವಳಿ ನಗರದ ನೀರು ಪೂರೈಕೆ ಸಂಬಂಧ ವ್ಯವಸ್ಥಿತವಾಗಿ ಯೋಜನೆಯನ್ನು ಕೊಲ್ಲುವ ಪಿತೂರಿ ನಡೆಯುತ್ತಿದೆ. ಅಮೃತ ಯೋಜನೆಯ ಅನುದಾನ ಕೇಂದ್ರ ಸರ್ಕಾರದ್ದು. ಅದನ್ನು ಸದ್ಬಳಕೆ ಮಾಡಬೇಕು.
>
> ಬಡವರು ಮತ್ತು ಅರ್ಹರಿಗೆ ಮನೆ ಮಂಜೂರು ಮಾಡುವ ಮನಸ್ಸು ಅಧಿಕಾರಿಗಳಲ್ಲಿ ಇರಬೇಕು. ಮನೆ ಮಂಜೂರು ಮಾಡದಿರುವುದಕ್ಕೆ ನಿಮ್ಮಲ್ಲಿ 101 ಕಾರಣಗಳಿರುತ್ತವೆ, ಆ ಮನೋಭಾವ ಬಿಡಿ. ಜೊತೆಗೆ ಪರಿಹಾರ ವಿತರಣೆಯಲ್ಲೂ ತಾರತಮ್ಯ ನಡೆದಿದೆ ಎಂಬ ದೂರುಗಳು ಕೇಳಿಬರುತ್ತಿವೆ.
>
> **– ಬಸವರಾಜ ಬೊಮ್ಮಾಯಿ.**
> ಸಂಸದರು, ಹಾವೇರಿ-ಗದಗ.

## ಬೆಳೆ ವಿವರ ದಾಖಲಿಸಿ

■ ವಿಜಯಸಾಕ್ಷಿ ಸುದ್ದಿ, ರೋಣ

2025-26ನೇ ಸಾಲಿನ ಹಿಂಗಾರು ಹಂಗಾಮಿನ ಬೆಳೆ ಸಮೀಕ್ಷೆ ಆರಂಭವಾಗಿದ್ದು, ರೈತರು ಗೂಗಲ್ ಪ್ಲೇಸ್ಟೋರ್‌ನಿಂದ ರೈತರ ಬೆಳೆ ಸಮೀಕ್ಷೆ-2025 ಆ್ಯಪ್ ಡೌನ್ಲೋಡ್ ಮಾಡಿಕೊಂಡು ಬೆಳೆ ವಿವರ ದಾಖಲಿಸಬೇಕು.

ಬೆಳೆ ಸಮೀಕ್ಷೆಯಿಂದ ಬೆಳೆ ವಿಮಾ, ಬೆಳೆ ನಷ್ಟ ಪರಿಹಾರ ಸೇರಿದಂತೆ ಇತರೆ ಸರಕಾರದಿಂದ ಸಿಗುವ ಸೌಲಭ್ಯಗಳನ್ನು ಪಡೆದುಕೊಳ್ಳಲು ಅನುಕೂಲವಾಗಲಿದೆ ಎಂದು ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಎಸ್.ಎಫ್. ತಹಸೀಲ್ದಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆರಳಚ್ಚು, ಶೀಘ್ರಲಿಪಿ ಪರೀಕ್ಷೆಗಳು ಜ. 12ರಿಂದ


■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ಬೆಂಗಳೂರು ಇವರು ನಡೆಸಲ್ಪಡುವ 2026ನೇ ಜನವರಿಯಲ್ಲಿ ನಡೆಯುವ ಬೆರಳಚ್ಚು ಮತ್ತು ಶೀಘ್ರಲಿಪಿ ವಾರ್ಷಿಕ ಪರೀಕ್ಷೆಗಳು ಜ. 12ರಿಂದ 14ರವರೆಗೆ ಬೆರಳಚ್ಚು ಪರೀಕ್ಷೆಗಳು ಮತ್ತು ಜ. 16ರಿಂದ ಜ. 20ರವರೆಗೆ ಶೀಘ್ರಲಿಪಿ ಪರೀಕ್ಷೆಗಳು ನಗರ ಹೊರವಲಯದ ಗದಗ ಜಿಲ್ಲಾ ಶಿಕ್ಷಕರ ತರಬೇತಿ ಕೇಂದ್ರ, ಕಳಸಾಪೂರ ರೋಡ್ ಗದಗಡಿಲ್ಲಿ ನಡೆಯಲಿವೆ.

ಬೆರಳಚ್ಚು ಮತ್ತು ಶೀಘ್ರಲಿಪಿ ಪರೀಕ್ಷೆಗೆ ಕುಳಿತ ವಿದ್ಯಾರ್ಥಿಗಳ ಪ್ರವೇಶ ಪತ್ರಗಳು ಸಂಬಂಧಪಟ್ಟ ವಾಣಿಜ್ಯ ವಿದ್ಯಾಲಯಗಳಲ್ಲಿ ಬಂದಿದ್ದು, ವಿದ್ಯಾರ್ಥಿಗಳು ಪಡೆದುಕೊಳ್ಳಬೇಕು. ಪರೀಕ್ಷೆಗೆ ಬರುವ ವಿದ್ಯಾರ್ಥಿಗಳು ಅರ್ಧ ಗಂಟೆ ಮುಂಚಿತವಾಗಿಯೇ ಬರಬೇಕು, ತಡವಾಗಿ ಬಂದವರಿಗೆ ಪರೀಕ್ಷಾ ಕೇಂದ್ರದಲ್ಲಿ ಪರೀಕ್ಷೆಗೆ ಕುಳಿತುಕೊಳ್ಳಲು ಅನುಮತಿ ಇರುವುದಿಲ್ಲವೆಂದು ನಗರದ ಶ್ರೀ ಕಲ್ಮೇಶ್ವರ ಬೆರಳಚ್ಚು ಮತ್ತು ಕಂಪ್ಯೂಟರ್ ವಿದ್ಯಾಲಯದ ಪ್ರಾಚಾರ್ಯರು ಹಾಗೂ ಗದಗ ಜಿಲ್ಲಾ ಬೆರಳಚ್ಚು ಮತ್ತು ಕಂಪ್ಯೂಟರ್ ವಿದ್ಯಾಶಾಲೆಗಳ ಸಂಘದ ಅಧ್ಯಕ್ಷರಾದ ಡಾ. ತಯಬಅಲಿ ಅ. ಹೊಂಬಳರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದ ವಚನಾನಂದ ಶ್ರೀಗಳು

# ಜ. 15ರಂದು ಹರಜಾತ್ರಾ ಮಹೋತ್ಸವ



■ ವಿಜಯಸಾಕ್ಷಿ ಸುದ್ದಿ, ಗದಗ

ಮಕರ ಸಂಕ್ರಾತಿ ಹಬ್ಬದ ಅಂಗವಾಗಿ ಜನವರಿ 15ರಂದು ಹರಿಹರದ ಪಂಚಮಸಾಲಿ ಜಗದ್ಗುರು ಪೀಠದಲ್ಲಿ ಹರಜಾತ್ರೆ ನಡೆಯಲಿದ್ದು, ಈ ವೇಳೆ ಕಿತ್ತೂರು ರಾಣಿ ಚನ್ನಮ್ಮಾಜೀ ದ್ವಿಶತಮಾನ ವಿಜಯೋತ್ಸವ ಸಮಾರೋಪ ಸಮಾರಂಭ, ಲಿಂ. ಶ್ರೀ ಡಾ.ಮಹಾಂತ ಶಿವಾಚಾರ್ಯ ಮಹಾಸ್ವಾಮಿಗಳವರ 13ನೇ ವರ್ಷದ ಪುಣ್ಯ ಸ್ಮರಣೋತ್ಸವ, ವಚನಾನಂದ ಮಹಾಸ್ವಾಮಿಗಳವರ ಅಷ್ಟಮ ವಾರ್ಷಿಕ ಪೀಠಾರೋಹಣ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಹರಿಹರದ ಪಂಚಮಸಾಲಿ ಗುರುಗಳಾದ ವಚನಾನಂದ ಶ್ರೀಗಳು ತಿಳಿಸಿದರು.

ನಗರದ ಪ್ರವಾಸಿ ಮಂದಿರದಲ್ಲಿ ಮಂಗಳವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಶ್ರೀಗಳು, ಹರಿಹರದ ಪೀಠದಲ್ಲಿ 2020ರಿಂದ ಹರಜಾತ್ರಾ ಮಹೋತ್ಸವ ನಡೆಯುತ್ತಿದೆ. ವರ್ಷದಿಂದ ವರ್ಷಕ್ಕೆ ಸಾಮಾಜಿಕವಾಗಿ, ಧಾರ್ಮಿಕವಾಗಿ ಜಾತ್ರೆ ಅದ್ದೂರಿಯಾಗಿ ನಡೆಯುತ್ತಿದೆ ಎಂದರು.

ಹಾವೇರಿಯ ಖ್ಯಾತ ವೈದ್ಯ ಡಾ. ಬಸವರಾಜ ವೀರಾಪೂರ ಅವರನ್ನು 2026ರ ಹರಜಾತ್ರೆಯ ಅಧ್ಯಕ್ಷರನ್ನಾಗಿ ▸▸3ನೇ ಪುಟಕ್ಕೆ

> ಹಿಂದಿನ ಜಾತ್ರಾ ಅವಧಿಯಲ್ಲಿ ಉದ್ಯೋಗ ಮೇಳ ಆಯೋಜನೆ ಮಾಡಲಾಗಿತ್ತು. ಸುಮಾರು 6,543 ಯುವಕ-ಯುವತಿಯರು ಭಾಗವಹಿಸಿದ್ದರು. 14ಕ್ಕೂ ಹೆಚ್ಚು ವಿವಿಧ ಕಂಪನಿಗಳು ಹಾಜರಿದ್ದವು. ಈ ವೇಳೆ ಸುಮಾರು 6,453 ಉದ್ಯೋಗಗಳು ಸೃಷ್ಟಿಯಾದವು. ಶೈಕ್ಷಣಿಕ ಶೃಂಗ ಸಭೆ ನಡೆಸಲಾಗಿತ್ತು. ರಾಜ್ಯದ ವಿಶ್ವ ವಿದ್ಯಾಲಯದ ಕುಲಪತಿಗಳನ್ನು ಕರೆತಂದು ಮಾಹಿತಿ ನೀಡಲಾಯಿತು. ಅದರಂತೆ ಪ್ರಸಕ್ತ ವರ್ಷ ಕಿತ್ತೂರ ಚನ್ನಮ್ಮ ವಿಜಯೋತ್ಸವದ ದ್ವಿಶತಮಾನೋತ್ಸವದ ಸಮಾರೋಪ ಸಮಾರಂಭ ಆಯೋಜಿಸಲು ತಿರ್ಮಾನಿಸಲಾಗಿದೆ ಎಂದು ಶ್ರೀಗಳು ತಿಳಿಸಿದರು.

### ಪಿ.ಎಸ್.ಐ ಈರಣ್ಣ ರಿತ್ತಿ ವರ್ಗಾವಣೆ ಆಗದಿದ್ದಲ್ಲಿ ಎಚ್.ಕೆ. ಪಾಟೀಲರಿಗೆ ಕಪ್ಪು ಬಾವುಟ ಪ್ರದರ್ಶನ

# ಶಾಸಕರಿಗೊಂದು, ಜನಸಾಮಾನ್ಯರಿಗೊಂದು ಕಾನೂನೇ?!

■ ವಿಜಯಸಾಕ್ಷಿ ಸುದ್ದಿ, ಗದಗ

ಶಿರಹಟ್ಟಿ ಪಿ.ಎಸ್.ಐ ಈರಣ್ಣ ರಿತ್ತಿ ಭ್ರಷ್ಟಾಚಾರದಲ್ಲಿ ಮುಳುಗಿದ್ದಾರೆ. ಅವರನ್ನು ಜಿಲ್ಲೆಯಿಂದ ವರ್ಗಾವಣೆಗೊಳಿಸಬೇಕು. ಇಲ್ಲದಿದ್ದರೆ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಆಗಮಿಸುವ ಕಾರ್ಯಕ್ರಮಗಳಲ್ಲಿ ನಿರಂತರವಾಗಿ ಕಪ್ಪು ಬಾವುಟ ಪ್ರದರ್ಶನ ಮಾಡಲಾಗುವುದು ಎಂದು ರಾಜ್ಯ ಹಿಂದೂ ಸಂಘಟನೆಗಳ ಒಕ್ಕೂಟದ ರಾಜ್ಯ ಸಂಚಾಲಕ ರಾಜು ಖಾನಪ್ಪನವರ ಎಚ್ಚರಿಕೆ ನೀಡಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಈರಣ್ಣ ರಿತ್ತಿ ವರ್ಗಾವಣೆಗೆ ಆಗ್ರಹಿಸಿ ನಿರಂತರವಾಗಿ ಪ್ರತಿಭಟನೆ ನಡೆಸಿದರೂ ಪ್ರಯೋಜನ ಆಗಿಲ್ಲ. ಈರಣ್ಣ ರಿತ್ತಿ ಭ್ರಷ್ಟ ಅಧಿಕಾರಿಯಾಗಿದ್ದು, ಲಂಚದ ರೂಪದಲ್ಲಿ ಪಡೆದ ಹಣವನ್ನು ಜಿಲ್ಲಾ ಉಸ್ತುವಾರಿ ಸಚಿವ ಎಚ್.




ಕೆ. ಪಾಟೀಲರಿಗೆ ನೀಡುತ್ತಿದ್ದಾರೆಯೇ ಎನ್ನುವ ಅನುಮಾನ ಕಾಡುತ್ತಿದೆ. ಬಳ್ಳಾರಿ ಗಲಾಟೆ ಪ್ರಕರಣದಲ್ಲಿ ಬೆಳಿಗ್ಗೆ ನೇಮಕವಾದ ಎಸ್ಪಿ ಅವರನ್ನು ರಾತ್ರೋರಾತ್ರಿ ವರ್ಗಾವಣೆಗೊಳಿಸಲಾಗಿದೆ. ಈ ಮೂಲಕ ರಾಜ್ಯ ಸರ್ಕಾರ ಕಾನೂನನ್ನು ಗಾಳಿಗೆ ತೂರಿ ದ್ವಿಮುಖ ನೀತಿಯ ಆಡಳಿತ ನಡೆಸುತ್ತಿದೆ ಎಂದು ಆರೋಪಿಸಿದರು.

ರಾಜ್ಯದಲ್ಲಿ ಪ್ರಥಮವಾಗಿ ಬಳ್ಳಾರಿಯಲ್ಲಿ ವಯಕ್ತಿಕ ಗನ್‌ಮ್ಯಾನ್‌ನಿಂದ ಯುವಕನ ಕೊಲೆ ನಡೆದಿದೆ. ಗಂಗಾವತಿ ಶಾಸಕ ಜನಾರ್ಧನ ರೆಡ್ಡಿ ಮನೆ ಮುಂದೆ ಬ್ಯಾನರ್ ಕಟ್ಟುವ ಉದ್ದೇಶವೇನಿತ್ತು? ರೆಡ್ಡಿ ಕುಟುಂಬವನ್ನು ಮುಗಿಸುವ ಹುನ್ನಾರ ರಾಜ್ಯ ಸರ್ಕಾರದಿಂದ ನಡೆದಿರಬಹುದು ಎಂಬ ಅನುಮಾನವಿದೆ. ಘಟನೆಗೆ ಸಂಬಂಧಿಸಿದಂತೆ ಎಂಟು ಪ್ರಕರಣ ದಾಖಲಾದರೂ ಯಾರನ್ನೂ ಬಂಧಿಸಿಲ್ಲ. ಶಾಸಕರಿಗೊಂದು, ಜನಸಾಮಾನ್ಯರಿಗೊಂದು ಕಾನೂನು ಇದೆಯೇ ಎಂದು ಪ್ರಶ್ನಿಸಿದ ಅವರು, ಈ ಮೂಲಕ ಡಾ. ▸▸4ನೇ ಪುಟಕ್ಕೆ

> ಜ. 7ರಂದು ರಾಜ್ಯ ಸರ್ಕಾರದ ದ್ವಿಮುಖ ನೀತಿ ಖಂಡಿಸಿ ಮುಳಗುಂದ ನಾಕಾದಿಂದ ಡಿಸಿ ಕಛೇರಿವರೆಗೆ ಪಾದಯಾತ್ರೆ ಮೂಲಕ ತೆರಳಿ ಜಿಲ್ಲಾಧಿಕಾರಿಗಳ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಗುವುದು. ಎಲ್ಲ ಹಿಂದೂಪರ ಸಂಘಟನೆಗಳು ಪ್ರತಿಭಟನೆಯಲ್ಲಿ ಭಾಗವಹಿಸಬೇಕು.
>
> **– ರಾಜು ಖಾನಪ್ಪನವರ.**
> ರಾಜ್ಯ ಸಂಚಾಲಕ,
> ರಾಜ್ಯ ಹಿಂದೂ ಸಂಘಟನೆಗಳ ಒಕ್ಕೂಟ.

## ಬಾಂಗ್ಲಾದೇಶದಲ್ಲಿ ಹಿಂದೂ ಉದ್ಯಮಿ ಮತ್ತು ಪತ್ರಕರ್ತನಾಗಿದ್ದ ರಾಣಾ ಪ್ರತಾಪ್ ಬೈರಾಗಿ ತಲೆಗೆ ಗುಂಡಿಕ್ಕಿ ಹತ್ಯೆ



■ವಿಜಯಸಾಕ್ಷಿ ಸುದ್ದಿ, ಬಾಂಗ್ಲಾದೇಶ

ಬಾಂಗ್ಲಾದೇಶದ ಜೆಸ್ಸೋರ್ ಜಿಲ್ಲೆಯಲ್ಲಿ ಸೋಮವಾರ 38 ವರ್ಷದ ರಾಣಾ ಪ್ರತಾಪ್ ಬೈರಾಗಿ ಅವರ ತಲೆಗೆ ಅಪರಿಚಿತ ವ್ಯಕ್ತಿಗಳು ಗುಂಡು ಹಾರಿಸಿದ್ದಾರೆ ಎಂದು ಹಲವು ಮಾಧ್ಯಮಗಳಲ್ಲಿ ವರದಿ ಪ್ರಕಟವಾಗಿದೆ.

ಬೈರಾಗಿ ಒಬ್ಬ ಹಿಂದೂ ಉದ್ಯಮಿ ಮತ್ತು ನರ್ರೈಲ್‌ನಿಂದ ಪ್ರಕಟವಾಗುವ ದೈನಿಕ್ ಬಿಡಿ ಖಬರ್ ಎಂಬ ಪತ್ರಿಕೆಯ ಹಂಗಾಮಿ ಸಂಪಾದಕರಾಗಿದ್ದರು ಎನ್ನಲಾಗಿದ್ದು, ಖುಲ್ನಾ ವಿಭಾಗದ ಜೆಸ್ಸೋರ್‌ನ ಕೇಶಬ್‌ಪುರ ಉಪಜಿಲ್ಲಾದ ಅರುವಾ ಗ್ರಾಮದ ನಿವಾಸಿಯಾಗಿದ್ದ ರಾಣಾ ಪ್ರತಾಪ್ ಮೊನಿರಾಂಪುರದ ಕೋಪಲಿಯಾ ಬಜಾರ್‌ನಲ್ಲಿ ಐಸ್‌ಕ್ರೀಂ ಕಾರ್ಖಾನೆಯನ್ನು ಹೊಂದಿದ್ದರು ಎಂಬ ಮಾಹಿತಿ ಲಭಿಸಿದೆ.

ರಾಣಾ ಪ್ರತಾಪ್ ಬೈರಾಗಿ ವಿರುದ್ಧ ಎರಡು ಪೊಲೀಸ್ ಠಾಣೆಗಳಲ್ಲಿ ನಾಲ್ಕು ಪ್ರಕರಣಗಳು ದಾಖಲಾಗಿವೆ ಎಂದು ಪೊಲೀಸರು ತಿಳಿಸಿದ್ದಾರೆ. ಆದರೆ, ಈ ಪ್ರಕರಣಗಳ ವಿವರಗಳು ತಿಳಿದುಬಂದಿಲ್ಲ.

ಐಸ್ ಕಾರ್ಖಾನೆಯ ಬೈರಾಗಿ ಎಂಬ ಮೋಟಾರ್ ಸೈಕಲ್‌ನಲ್ಲಿ ಬಂದ ಮೂವರು ದುಷ್ಕರ್ಮಿಗಳು, ಕಪಾಲಿಯಾ ಬಜಾರ್‌ನ ಪಶ್ಚಿಮ ಭಾಗದಲ್ಲಿರುವ ಕಪಾಲಿಯಾ ಕ್ಲಿನಿಕ್ ಮತ್ತು ಡಯಾಗ್ನೋಸ್ಟಿಕ್ ಸೆಂಟರ್‌ನ ಮುಂಭಾಗದ ಓಣಿಗೆ ಕರೆದೊಯ್ದು ಅವರ ತಲೆಗೆ ಗುಂಡು ಹಾರಿಸಿದ್ದಾರೆ ಎಂದು ಪಿಟಿಐ ವರದಿ ಮಾಡಿದೆ.

ಕೊಲೆ ಮಾಡಿದವರು ಯಾರು ಅಥವಾ ಏನು ಎಂಬುದನ್ನು ಕಂಡುಹಿಡಿಯಲು ತನಿಖೆ ಆರಂಭಿಸಲಾಗಿದೆ.

ಈ ಗುಂಡಿನ ದಾಳಿಯು ಹಿಂದೂ ಸಮುದಾಯದ ಸದಸ್ಯರ ವಿರುದ್ಧ ನಡೆಯುತ್ತಿರುವ ಹಿಂಸಾತ್ಮಕ ಘಟನೆಗಳ ಸರಣಿಯಲ್ಲಿ ಇತ್ತೀಚಿನದಾಗಿದೆ. ಜನವರಿ 3 ರಂದು, ಖೋಕೋನ್ ಚಂದ್ರ ದಾಸ್ (50) ಅವರನ್ನು ಕ್ರೂರವಾಗಿ ಹಲ್ಲೆ ಮಾಡಿ, ಕಡಿದು, ಬೆಂಕಿ ಹಚ್ಚಿ ನಂತರ ಕೊಲ್ಲಲಾಗಿತ್ತು.

ಡಿಸೆಂಬರ್ 24 ರಂದು, ರಾಜ್ಬರಿ ಪಟ್ಟಣದ ಪಂಗ್ಶಾ ಉಪಜಿಲಾದಲ್ಲಿ ಸುಲಿಗೆ ಆರೋಪದ ಮೇಲೆ ಅಮೃತ್ ಮಂಡಲ್ ಎಂಬ ಮತ್ತೊಬ್ಬ ಹಿಂದೂ ವ್ಯಕ್ತಿಯನ್ನು ಗುಂಪು ಗುಂಪಾಗಿ ಹತ್ಯೆ ಮಾಡಲಾಯಿತು.

ಡಿಸೆಂಬರ್ 18 ರಂದು, ಮೈಮೆನ್ಸಿಂಗ್ ನಗರದಲ್ಲಿ ಧರ್ಮನಿಂದೆಯ ಆರೋಪದ ಮೇಲೆ ದೀಪು ಚಂದ್ರ ದಾಸ್ (25) ಅವರನ್ನು ಗುಂಪೊಂದು ಗುಂಪು ಗುಂಪಾಗಿ ಹೊಡೆದು ಕೊಂದು ಅವರ ದೇಹವನ್ನು ಬೆಂಕಿಯಲ್ಲಿ ಸುಡಲಾಯಿತು.

ಶ್ರೀ ಮದ್ರಂಭಾಪುರಿ ಜಗದ್ಗುರು ವೀರಸೋಮೇಶ್ವರ ಭಗವತ್ಪಾದಂಗಳವರ 70ನೇ ಜನ್ಮದಿನದ ನಿಮಿತ್ತ ಲೇಖನ

# ಮಾನವೀಯತೆ ಇಲ್ಲದ ಧರ್ಮ ಧರ್ಮವಲ್ಲ

ಶ್ರೀ ಮದ್ರಂಭಾಪುರಿ ವೀರ ಸಿಂಹಾಸನಾಧೀಶ್ವರ ಶ್ರೀ ಶ್ರೀ ಶ್ರೀ 1008 ಜಗದ್ಗುರು ಡಾ. ವೀರ ಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದಂಗಳವರ ಬದುಕು, ಬರಹ, ಇರುವಿಕೆ, ಕ್ರಿಯಾಶೀಲವಾಗಿದೆ, ಆದರ್ಶಮಯವಾಗಿದೆ. ನನ್ನ ದೃಷ್ಟಿಯಲ್ಲಿ ಅವರೊಬ್ಬ ಸಮಾಜ ಚಿಂತಕರು, ರಾಷ್ಟ್ರಪ್ರೇಮಿಗಳು, ಸಾಹಿತಿಗಳು, ಉತ್ತಮ ಬರಹಗಾರರು. ಅವರದು ತೆರೆದ ಬದುಕು. ಅತುಲ ತತ್ವನಿಷ್ಠೆ, ಸಿದ್ಧಾಂತಕ್ಕಾಗಿ ನಿಷ್ಠುರವಾಗಿ ಹೋರಾಡುವಂಥವರು. ಸಮಾಜದಲ್ಲಿಯ ಎಲ್ಲ ವರ್ಗದ ಜನ ಸುಖ, ಶಾಂತಿಯಿಂದ ಬಾಳಲಿ ಎಂಬ ಅವರ ಆಶಯ ಅವರನ್ನು ಪ್ರತಿಯೊಬ್ಬರೂ ಆರಾಧಿಸುವಂತೆ ಮಾಡಿದೆ.



ಜನ್ಮ ಕೊಟ್ಟ ಭೂಮಿ ಹುಬ್ಬಳ್ಳಿ ತಾಲೂಕ ಹಳ್ಯಾಳ ಹಿರೇಮಠ 7/1/1956 ಅಭಿನವ ರೇಣುಕ ಮಹಾತಪಸ್ವಿ ಶ್ರೀ ಮದ್ರಂಭಾಪುರಿ ಪೀಠದ ಲಿಂ. ಜಗದ್ಗುರು ವೀರಗಂಗಾಧರ ಶಿವಾಚಾರ್ಯ ಭಗವತ್ಪಾದಂಗಳವರ ಹಾಗೂ ಲಿಂ. ಜಗದ್ಗುರು ವೀರರುದ್ರಮುನಿದೇವ ಶಿವಾಚಾರ್ಯ ಭಗವತ್ಪಾದಂಗಳವರ ಕರುಣೆಯ ಕೂಸಾಗಿ ಬೆಳೆದದ್ದು, ಜೀವನದಲ್ಲಿ ಪಡೆದ ಮೊದಲನೇ ಭಾಗ್ಯ. 1976ರಲ್ಲಿ ಹಳ್ಯಾಳ ಹಿರೇಮಠ ಪಟ್ಟಾಧಿಕಾರಿಗಳಾಗಿ ಜಗದ್ಗುರು ಪಂಚಪೀಠಾಧೀಶ್ವರರ ದಿವ್ಯ ಸಾನ್ನಿಧ್ಯದಲ್ಲಿ ಅಧಿಕಾರ ಸ್ವೀಕಾರ. ಹೆಚ್ಚಿನ ಅಭ್ಯಾಸಕ್ಕಾಗಿ ಬೆಂಗಳೂರಿಗೆ ಪ್ರಯಾಣ. ಮಹಂತಿನ ಮಠದಲ್ಲಿದ್ದು, ಬೆಂಗಳೂರು ವಿಶ್ವವಿದ್ಯಾಲಯದಿಂದ ಪದವಿ ಸಂಪಾದಿಸಿ ನಂತರ ಚಾಮರಾಜೇಂದ್ರ ಸಂಸ್ಕೃತ ಪಾಠಶಾಲೆಯಲ್ಲಿ ಅಭ್ಯಾಸಗೈದು ಪದವಿ ಪಡೆದರು.

ವಿದ್ಯಾರ್ಥಿ ದಿಸೆಯಲ್ಲಿಯೇ ಕವನ, ಲೇಖನಗಳನ್ನು ಬರೆದು ಸಾದರಪಡಿಸಿದ ರೀತಿಯನ್ನು ಕಂಡಾಗ ಅವರೊಬ್ಬ ಅಪ್ಪಟ ಕನ್ನಡ ಸಾಹಿತಿ ಎಂಬುದು ಅಭಿಮಾನ ಪಡುವ ಸಂಗತಿ. ಜೀವನದಲ್ಲಿ ಒದಗಿ ಬಂದ ಎಲ್ಲ ಅವಕಾಶಗಳನ್ನು ಸದುಪಯೋಗ ಮಾಡಿಕೊಂಡ ಭಾಗ್ಯಾಶಾಲಿಗಳು. ಸೌಜನ್ಯ ಸಾಕಾರ ಮೂರ್ತಿಗಳಾಗಿ ಬೆಳೆದದ್ದು ಜೊತೆಗೆ ಆಚಾರ, ಪೂಜೆ, ತಪಸ್ಸು ನಿತ್ಯ ನಿಯಮಗಳನ್ನು ಚಾಚೂ ತಪ್ಪದೇ ನಡೆಸಿಕೊಂಡು ಬಂದಿದ್ದಾರೆ. 1985ರಲ್ಲಿ ಬೆಂಗಳೂರ ಜಿಲ್ಲಾ ಶಿವಗಂಗಾ ಕ್ಷೇತ್ರದ ಪಟ್ಟಾಧಿಕಾರಿಗಳಾಗಿ ಅಧಿಕಾರ ಪಡೆದರು. ರಾಜಧಾನಿಯಲ್ಲಿ ಪ್ರತಿಭಾವಂತ ಲೇಖಕರ, ಸಾಹಿತಿಗಳ, ಪಂಡಿತರ ಸಂಪರ್ಕ ಪಡೆದರು. 'ಅಮರವಾಣಿ' ಧಾರ್ಮಿಕ ಪತ್ರಿಕೆಯ ಸಂಪಾದಕರಾಗಿ ಸಮರ್ಥವಾಗಿ ಕಾರ್ಯನಿರ್ವಹಿಸಿದರು. ಮಾತುಗಳು ಮಿತವಾಗಿದ್ದರೂ ಗಾಂಭೀರ್ಯದಿಂದ ತುಂಬಿರುತ್ತವೆ. ಅಷ್ಟೇ ಅರ್ಥಪೂರ್ಣ, ಭಾವಪೂರ್ಣ.

06/02/1992 ರಂದು ರಂಭಾಪುರಿ ಪೀಠದ 121ನೇ ಜಗದ್ಗುರುಗಳಾಗಿ ವೀರಸಿಂಹಾಸನ ಪೀಠವನ್ನು ಅರೋಹಣ ಮಾಡಿದ ನಂತರ ಅಂದು ಶುಭಾಶೀರ್ವಚನ ಸಂದೇಶದಲ್ಲಿ ನೀಡಿದ ಎಲ್ಲ ಕಾರ್ಯಗಳನ್ನು ಕ್ರಿಯಾ ರೂಪಕ್ಕೆ ತಂದಿದ್ದರಿಂದ ಅವರ ಬದುಕೇ ಕ್ರಿಯಾಶೀಲವಾಗಿದೆ ಎಂದು ಹೆಮ್ಮೆಯಿಂದ ಹೇಳಬೇಕಾಗಿದೆ. ಹಿಂದಿನ ಜಗದ್ಗುರುಗಳವರ ಯೋಜನೆಗಳನ್ನು ಸಾಕಾರಗೊಳಿಸುವದರ ಜೊತೆಗೆ ಭಕ್ತರ ವಿಚಾರಗಳಿಗೆ ಸ್ಪಂದಿಸಿ ಅನೇಕ ಜನೋಪಕಾರಿ ಯೋಜನೆಗಳನ್ನು ಹುಟ್ಟುಹಾಕಿ ಅವುಗಳನ್ನು ಪೂರೈಸಲು ಸದಾ ಶ್ರಮಿಸುತ್ತಿದ್ದಾರೆ.

ಕೃಷ್ಣಾ ಮೇಲ್ದಂಡೆ ಯೋಜನೆ ಪೂರೈಸಲು 1995ರಲ್ಲಿ 1 ಲಕ್ಷ ರೂ.ಗಳನ್ನು ಸರಕಾರಕ್ಕೆ ಕೊಟ್ಟು ಆಶೀರ್ವದಿಸಿದ್ದಾರೆ. ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ 1 ಲಕ್ಷ ರೂ. ಸ್ಥಿರ ನಿಧಿ ಇಟ್ಟು ಗ್ರಂಥ ಪ್ರಕಟಿಸಲು ಆಶೀರ್ವದಿಸಿದ್ದು, ಲಾತೂರ ಭೂಕಂಪ ಸಂಭವಿಸಿ ನಿರಾಶ್ರಿತರಾದವರಿಗೆ ತುಮಕೂರು ನಗರದಲ್ಲಿ ಪಾದಯಾತ್ರೆ ಮಾಡಿ 1 ಗಂಟೆಯಲ್ಲಿ 3 ಲಕ್ಷ ರೂ. ಹಣ ಸಂಗ್ರಹಿಸಿ ರಾಷ್ಟ್ರದ ಪರಿಹಾರ ನಿಧಿಗೆ ಅರ್ಪಿಸಿದ್ದು, ಕಾರ್ಗಿಲ್ ಯುದ್ಧ ಸಮಯದಲ್ಲಿ ಗದಗ ನಗರದಲ್ಲಿ ಪಾದಯಾತ್ರೆ ಕೈಕೊಂಡು ಹಣ ಸಂಗ್ರಹಿಸಿ ಪರಿಹಾರ ನಿಧಿಗೆ ಕಳಿಸಿದ್ದು, ಗದುಗಿನ ಅಂಧರ ಆಶ್ರಮ ವೀರೇಶ್ವರ ಪುಣ್ಯಾಶ್ರಮದ ವಿದ್ಯಾರ್ಥಿಗಳ ಪ್ರಸಾದಕ್ಕಾಗಿ 1 ಲಕ್ಷ ರೂಪಾಯಿ ನೀಡಿ ಆಶೀರ್ವದಿಸಿದ್ದು ಇವೆಲ್ಲ ಘಟನೆಗಳನ್ನು ಸ್ಮರಿಸಿಕೊಂಡಾಗ ಅವರಲ್ಲಿಯ ರಾಷ್ಟ್ರಾಭಿಮಾನ, ಧರ್ಮಾಭಿಮಾನ ಜೊತೆಗ ಅವರಲ್ಲಿಯ ಮಾನವೀಯ ಗುಣಗಳನ್ನು ಅವಲೋಕಿಸಿದಾಗ ಅವರೊಬ್ಬ ಪ್ರಗತಿಪರ ವಿಚಾರ ಹೊಂದಿದ ತ್ರಿಕಾಲ ವಂದನೀಯರು ಹಾಗೂ ಪಾತ್ರ ಸ್ಮರಣೀಯ ಜಗದ್ಗುರುಗಳು ಎಂದು ಹೇಳಲು ಹೆಮ್ಮೆಯಾಗುತ್ತದೆ.

ಸತ್ವಯುಕ್ತವಾದ ಅವರ ಆಶೀರ್ವಚನದ ಪ್ರಭಾವ ಭಕ್ತರನ್ನು ವಿಸ್ಮಯ ಹಾಗೂ ಮೂಕರನ್ನಾಗಿ ಮಾಡಿದೆ.

ಮಾನವೀಯತೆ ಇಲ್ಲದ ಧರ್ಮ ಧರ್ಮವೇ ಅಲ್ಲ, ಧರ್ಮ ಸಕಲರ ಬಾಳಿನ ಸುಖಕ್ಕೆ ಮಾರ್ಗದರ್ಶಿಯಾಗಿರಬೇಕು. ವ್ಯಕ್ತಿ-ವ್ಯಕ್ತಿಗಳಲ್ಲಿ, ಸಮಾಜ-ಸಮಾಜದಲ್ಲಿ ರಾಷ್ಟ್ರ-ರಾಷ್ಟ್ರಗಳಲ್ಲಿ ಹೆಚ್ಚುತ್ತಿರುವ ವೈರ ಭಾವನೆ, ಸಂಕುಚಿತ ವಿಚಾರಗಳನ್ನು ಹೋಗಲಾಡಿಸಲು ದರ್ಮ ಮಾರ್ಗದಿಂದ ನಡೆಯುವದರಲ್ಲಿಯೇ ಸುಖ, ಶಾಂತಿ, ಸರ್ವರ ಏಳ್ಗೆ ಇದೆ ಎಂದು ಉಪದೇಶಿಸುವ ಅವರ ಆಶೀರ್ವಚನ ಸರ್ವಜನರ ಮೆಚ್ಚುಗೆ ಪಡೆದಿದೆ.

ದೂರದೃಷ್ಟಿಯುಳ್ಳ ಅವರ ವಿಚಾರಗಳು, ಸಂಕಲ್ಪಗಳು ಪ್ರಶಂಸಗೆ ಪಾತ್ರವಾಗಿದೆ. ಪೀಠದಲ್ಲಿ ನಡೆಯುವ ಶಿಕ್ಷಣ ಸಂಸ್ಥೆಗಳು ನಿತ್ಯ ದಾಸೋಹ, ಯಾತ್ರಾ ನಿವಾಸಿಗಳಿಗೆ ಕಟ್ಟಿಸಿದ ಯಾತ್ರಿ ನಿವಾಸಗಳು, ಸುಂದರ ಹಾಗೂ ಭವ್ಯವಾಗಿ ಕಟ್ಟಿಸಿದ ಸಮುದಾಯ ಭವನ 500 ವಿದ್ಯಾರ್ಥಿಗಳಿಗೆ ವಾಸಿಸಲು ಕಟ್ಟಿಸಿದ ವಿದ್ಯಾರ್ಥಿ ನಿಲಯಗಳು ಅವರ ಕರ್ತವ್ಯ ಶಕ್ತಿಯ ಪ್ರತೀಕ.

ಶಾಂತ ಸ್ವಭಾವ ಸರಳ, ಸಜ್ಜನಿಕೆ, ಶಿಷ್ಯರು ನಿವೇದಿಸುವ ಯಾವುದೇ ಸಮಸ್ಯೆಗಳನ್ನು ಹಸನ್ಮುಖಿಯಾಗಿ ಶಾಂತಚಿತ್ತದಿಂದ ಕೇಳಿ ಅವುಗಳ ಪರಿಹಾರಕ್ಕೆ ಕೊಡುವ ಸಲಹೆಗಳು, ಆಶೀರ್ವದಿಸುವ ದೃಶ್ಯ ಮನಸ್ಸಿನ ಮೇಲೆ ಅಗಾಧವಾದ ಪರಿಣಾಮ ಬೀರಿದೆ. ಗುರುಗಳಾದವರು ಶಿಷ್ಯರನ್ನು ಕರುಣಿಸುವ ಭಾವ, ಅವರಲ್ಲಿದ್ದ ಮಾತೃ ಹೃದಯ, ಯಾರೇ ಬರಲಿ ಅವರಿಗೆ ಮನದಲ್ಲಿ ಧೈರ್ಯ ತುಂಬಿ ಸಕಲ ಜೀವಾತ್ಮರಿಗೆ ಲೇಸನ್ನೇ ಬಯಸುವ ಅವರ ಬದುಕು ಸಮಾಜದ ಉನ್ನತಿಗೆ ಮೀಸಲಾಗಿದೆ. ಪ್ರಾತಃಕಾಲ ಪ್ರಾರಂಭವಾದ ಅವರ ದಿನಚರಿ ರಾತ್ರಿಯವರೆಗೆ ಎಡೆಬಿಡದೆ ಕಾರ್ಯಗಳಲ್ಲಿ ಮಗ್ನರಾಗಿರುತ್ತಾರೆ. ಅವರ ಪಾದ ಸ್ಪರ್ಶದಿಂದ ಬದುಕಿನಲ್ಲಿ ನೆಮ್ಮದಿ ಪಡೆದವರೆಷ್ಟೋ ಜನ, ಧನ್ಯವಾದವೆಂದು ಹೇಳುವವರು ಎಷ್ಟೋ ಜನ, ಅವರಲ್ಲಿಯ ಪಾಂಡಿತ್ಯ-ಪ್ರತಿಭೆಗಳು ಬಡವರ ಬಗೆಗೆ ಇರುವ ಅವರ ಚಿಂತನಗಳು ಅವರನ್ನು ಪ್ರತಿಯೊಬ್ಬರೂ ಆರಾಧಿಸುವಂತೆ ಮಾಡಿವೆ.



**- ವೀರೇಶ ಎಸ್.ಕೂಗು.**
ವಕೀಲರು, ತೆರಿಗೆ ಸಲಹೆಗಾರರು-ಗದಗ.

ದಿ. ಸಿ.ಬಿ. ಬಡ್ನಿ ಪ್ರತಿಷ್ಠಾನದಿಂದ 'ಮನೆ-ಮನದಲ್ಲಿ ಶರಣ ಸಂಸ್ಕೃತಿ' ಕಾರ್ಯಕ್ರಮ

# ದಿ. ಸಿ.ಬಿ. ಬಡ್ನಿಯವರದು ಸಾರ್ಥಕ ಬದುಕು



ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ಮಂಜುನಾಥ ಮಟ್ಟ ಮಾತನಾಡಿ, ಸಮಾಜಮುಖಿ ಕಾಯಕ ಯೋಗಿ ಪ್ರಶಸ್ತಿ ಪಡೆದ ಜನ್ನತಬಿ ದಂಡಿನ ಅವರು ನಿಸ್ವಾರ್ಥ ಸೇವೆಯಿಂದ ಮುಳಗುಂದ ಪಟ್ಟಣದ ಮಾಹಾ ತಾಯಿಯಾಗಿದ್ದಾರೆ. ಇಂದಿನ ತಲೆಮಾರಿನವರು ತಂದೆ-ತಾಯಿಗಳನ್ನು ಮರೆಯುತ್ತಿದ್ದಾರೆ. ತಂದೆ-ತಾಯಿಗಳು ನಮಗೆಲ್ಲರಿಗೂ ಸಾಕ್ಷಾತ್ ದೇವರು. ಅವರ ಸೇವೆ ಮಾಡುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದರು.

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ವಿಜಾಪೂರದ ಸಿದ್ದೇಶ್ವರ ಸ್ವಾಮೀಜಿ ಆಚಾರ-ವಿಚಾರಗಳಿಂದ ಶ್ರೀಮಂತರಾದವರು. ಆದರ್ಶ ಮೌಲ್ಯಗಳು, ಪರಂಪರೆಗಳನ್ನು ಅಲ್ಲಮ ಪ್ರಭುವಿನ ವಚನ ಸಾಹಿತ್ಯಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಬದುಕಿದವರು. ಇಂದ್ರಿಯ ನಿಗ್ರಹ, ಮನಸ್ಸಿನ ನಿಯಂತ್ರಣ, ಮಾತುಗಳು, ಕಾಯಕ ತತ್ವಗಳ ಮೂಲಕ ಸಾರ್ಥಕವಾಗಿ ಬದುಕಿ ಬಾಳಿ ನಮಗೆಲ್ಲಾ ಮಾರ್ಗದರ್ಶನ ನೀಡಿದವರು. ಇಂತಹ ಮಹನೀಯರ ಹಾದಿಯಲ್ಲಿ ದಿ. ಸಿ.ಬಿ. ಬಡ್ನಿ ಅವರು ಸೇರುತ್ತಾರೆ ಎಂದು ಆರ್.ಎನ್. ದೇಶಪಾಂಡೆ ಸರಕಾರಿ ಪ್ರಥಮದರ್ಜೆ ಕಾಲೇಜು ಪ್ರಾಚಾರ್ಯ ಆರ್.ಎಂ. ಕಲ್ಲನಗೌಡರ ಹೇಳಿದರು.

ಅವರು ಶರಣ ಸಾಹಿತ್ಯ ಪರಿಷತ್ತು, ಕದಳಿ ವೇದಿಕೆ ಮತ್ತು ದಿ. ಸಿ.ಬಿ. ಬಡ್ನಿ ಪ್ರತಿಷ್ಠಾನದಿಂದ ಮನೆ ಮನದಲ್ಲಿ ಶರಣ ಸಂಸ್ಕೃತಿ ಹಾಗೂ ದಿ. ಸಿ.ಬಿ. ಬಡ್ನಿ ಅವರ ಜನ್ಮದಿನಾಚರಣೆ ಅಂಗವಾಗಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಉಪನ್ಯಾಸ ನೀಡಿ ಮಾತನಾಡುತ್ತಿದ್ದರು.

ದಿ. ಸಿ.ಬಿ. ಬಡ್ನಿ ಅವರ ಪ್ರತಿಷ್ಠಾನದಿಂದ ಕೊಡಮಾಡಲಾದ ಸಮಾಜಮುಖಿ ಕಾಯಕಯೋಗಿ ಪ್ರಶಸ್ತಿ ಸ್ವೀಕರಿಸಿದ ಗುರುಸಿದ್ದಪ್ಪ ಕೊರವಣ್ಣವರ ಮಾತನಾಡಿ, ಸಾವಯವ ಕೃಷಿಯಲ್ಲಿ ಲಾಭವಿಲ್ಲ ಎಂದು ಸಾಕಷ್ಟು ಜನರು ಕೃಷಿಯಿಂದ ವಿಮುಖರಾಗುತ್ತಿದ್ದಾರೆ. ಆದರೆ, ಸಾವಯವ ಕೃಷಿಯಿಂದ ಉತ್ತಮ ಇಳುವರಿ ಜೊತೆಯಲ್ಲಿ ಸಾಕಷ್ಟು ಲಾಭದಾಯಕ ಉದ್ಯೋಗಗಳನ್ನು ಮಾಡಲು ಸಾಧ್ಯವಾಗುತ್ತದೆ. ಸಾವಯವ ಕೃಷಿಯಲ್ಲಿ ಆರೋಗ್ಯ ಅಡಗಿದೆ. ಪ್ರತಿಯೊಬ್ಬರೂ ಸಾವಯವ ಕೃಷಿ ಮಾಡಿದಲ್ಲಿ ಉತ್ತಮ ಇಳುವರಿ ಪಡೆಯಲು ಸಾಧ್ಯವಾಗುತ್ತದೆ ಎಂದರು. ಎಸ್.ಎಂ. ನೀಲಗುಂದ ಮಾತನಾಡಿ, ದಿ. ಸಿ.ಬಿ. ಬಡ್ನಿ ಅವರ ಹೆಸರಿನಲ್ಲಿ ಪ್ರತಿಷ್ಠಾನ ಮಾಡಿ ಸಮಾಜಮುಖಿ ಕಾಯಕಯೋಗಿ ಪ್ರಶಸ್ತಿ ನೀಡುತ್ತಿರುವುದು ಶ್ಲಾಘನಿಯವಾಗಿದ್ದು, ಅವರ ಆತ್ಮಕ್ಕೆ ಶಾಂತಿ ದೊರೆಯಲಿ. ಅವರು ಹಾಕಿಕೊಟ್ಟ ಮಾರ್ಗದಲ್ಲಿ ನಾವೆಲ್ಲರೂ ಸಾಗೋಣ ಎಂದರು.

ಡಾ. ಎಸ್.ಸಿ. ಚವಡಿ, ಡಾ. ಆರ್.ಎಂ. ಕಲ್ಲನಗೌಡರ, ಎಸ್.ಎಂ. ನೀಲಗುಂದ, ಎಸ್.ಸಿ. ಬಡ್ನಿ, ಗುರುಸಿದ್ದಪ್ಪ ಕೊರವಣ್ಣವರ, ಗೌರಮ್ಮಾ ಬಡ್ನಿ, ಜನ್ನತಬಿ ದಂಡಿನ, ರಾಜೇಶ್ವರಿ ಬಡ್ನಿ ಇದ್ದರು.

ಶಿಗ್ಲಿಯ ಎಸ್.ಎಸ್. ಕೂಡ್ಲಮಠ ಶಾಲೆಯಲ್ಲಿ ಜ.9ರಂದು ತಜ್ಞ ವೈದ್ಯರಿಂದ

# ಬೃಹತ್ ಉಚಿತ ಆರೋಗ್ಯ ಶಿಬಿರ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಶಿಗ್ಲಿ ಗ್ರಾಮದ ಗ್ರಾಮ ಭಾರತಿ ಶಿಕ್ಷಣ ಸಮಿತಿಯ ಎಸ್.ಎಸ್. ಕೂಡ್ಲಮಠ ಕನ್ನಡ ಆಂಗ್ಲ ಮಾಧ್ಯಮ ಪ್ರಾಥಮಿಕ-ಪ್ರೌಢಶಾಲೆ, ಶ್ರೀಮತಿ ಜಾನಕಿಬಾಯಿ ರಜಪೂತ ಕನ್ನಡ ಪ್ರಾಥಮಿಕ ಶಾಲೆ ಹಾಗೂ ಪುಟ್ಟಯ್ಯ ಸಂಗಯ್ಯ ಕೂಡ್ಲಮಠ ಶಿಕ್ಷಣ ಸಂಸ್ಥೆಯ ಹಳೆಯ ವಿದ್ಯಾರ್ಥಿಗಳು, ಖ್ಯಾತ ವೈದ್ಯರುಗಳು ಅಗಲಿದ ಶಿಕ್ಷಕರ ಸ್ಮರಣಾರ್ಥ ಜ.9ರಂದು ಎಸ್.ಎಸ್. ಕೂಡ್ಲಮಠ ಶಾಲಾವರಣದಲ್ಲಿ ಬೃಹತ್ ಉಚಿತ ಆರೋಗ್ಯ ಶಿಬಿರ ಹಮ್ಮಿಕೊಳ್ಳಲಾಗಿದ್ದು, ನಾಗರಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಎಸ್.ಪಿ. ಬಳಿಗಾರ ಹೇಳಿದರು.



ಅವರು ಮಂಗಳವಾರ ಪೂರ್ವಭಾವಿ ಸಭೆಯಲ್ಲಿ ಮಾಹಿತಿ ನೀಡಿ, 6 ದಶಕಗಳಿಂದ ಶಿಕ್ಷಣ ಸೇವೆಯಲ್ಲಿ ನಿರತವಾಗಿರುವ ಎಸ್.ಎಸ್. ಕೂಡ್ಲಮಠ ಶಾಲೆಯಲ್ಲಿ ಕಲಿತ ಸಾವಿರಾರು ವಿದ್ಯಾರ್ಥಿಗಳು ಇಂದು ಎಲ್ಲ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುವ ಮೂಲಕ ಶಾಲೆಯ ಕೀರ್ತಿ ಹೆಚ್ಚಿಸಿದ್ದಾರೆ. ಈ ಶಾಲೆಯಲ್ಲಿ ಕಲಿತ ಖ್ಯಾತ ವೈದ್ಯರುಗಳಾದ ಮೆದುಳು ಮತ್ತು ನರರೋಗ ಶಸ್ತ್ರ ಚಿಕಿತ್ಸಾ ತಜ್ಞರಾದ ಡಾ. ಎಸ್.ಪಿ. ಬಳಿಗಾರ, ಹೃದಯರೋಗ ತಜ್ಞರಾದ ಡಾ. ರವಿ ಸಾಲ್ಮನಿ, ದಾವಣಗೆರೆ ಎಸ್.ಎಸ್. ಆಸ್ಪತ್ರೆಯ ಮಾಜಿ ನಿರ್ದೇಶಕರಾದ ಡಾ. ಎನ್.ಕೆ. ಕಾಳಪ್ಪನವರ, ಚಿಕ್ಕ ಮಕ್ಕಳ ತಜ್ಞರಾದ ಡಾ. ವಿನೋದ ರಟಗೇರಿ, ತಜ್ಞವೈದ್ಯರಾದ ಪ್ರದೀಪ ಕಲ್ಲೊಳ್ಳಿಮಠ, ಲಂಡನ್‌ನ ರೇಡಿಯೋಲಾಜಿಸ್ಟ್ ಡಾ. ರಾಜಶ್ರೀ ಪಾಟೀಲ ಸೇರಿ ಸ್ಥಳೀಯ ವೈದ್ಯರುಗಳ ನೇತೃತ್ವದಲ್ಲಿ ಉಚಿತ ಆರೋಗ್ಯ ಶಿಬಿರ ಏರ್ಪಡಿಸಲಾಗಿದೆ. ಆರೋಗ್ಯ ಶಿಬಿರವನ್ನು ಶಾಸಕ ಡಾ. ಚಂದ್ರು ಲಮಾಣಿ ಉದ್ಘಾಟಿಸುವರು, ಎಸ್.ಪಿ. ಬಳಿಗಾರ ಅಧ್ಯಕ್ಷತೆ ವಹಿಸುವರು. ಅತಿಥಿಗಳಾಗಿ ಮಾಜಿ ಶಾಸಕರಾದ ಜಿ.ಎಂ. ಮಹಾಂತಶೆಟ್ಟರ, ಜಿ.ಎಸ್. ಗಡ್ಡದೇವರಮಠ, ಗದಗ ಜಿಮ್ಸ್‌ನ ನಿರ್ದೇಶಕರಾದ ಬಸವರಾಜ ಬೊಮ್ಮನಹಳ್ಳಿ, ಎಫ್.ಡಿ. ಹುನಗುಂದ ಉಪಸ್ಥಿತರಿರುವರು. ಸಂಜೆ ವಾರ್ಷಿಕ ಸ್ನೇಹ ಸಮ್ಮೇಳನ ಜರುಗಲಿದೆ ಎಂದು ಹೇಳಿದರು.

ಈ ವೇಳೆ ಸಿ.ಎಂ. ರಾಗಿ, ಎಚ್.ಎಫ್. ತಳವಾರ, ಬಿ.ಎಂ. ಕಳಸದ, ಎಂ.ಎನ್. ಪಾಟೀಲ, ವೀರಣ್ಣ ಪವಾಡದ, ಪ್ರವೀಣ ಕಾಳಪ್ಪನವರ, ರಮೇಶ ಅಣ್ಣಿಗೇರಿ, ಸಿ.ಬಿ. ಮುಗಳಿ, ಎಲ್.ಪಿ. ಲಮಾಣಿ, ಆರ್.ಎಂ. ಜಂಬೇರಾಳ ಮುಂತಾದವರಿದ್ದರು.

# ರಕ್ತದಾನ ಎಲ್ಲ ದಾನಕ್ಕಿಂತಲೂ ಶ್ರೇಷ್ಠ



■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಜೀವ ಉಳಿಸುವ ಮಹಾನ್ ಕಾರ್ಯವಾಗಿರುವ ರಕ್ತದಾನ ಎಲ್ಲ ದಾನಕ್ಕಿಂತಲೂ ಶ್ರೇಷ್ಠ ಎಂದು ಕೊತಬಾಳ ಶ್ರೀ ಗಂಗಾಧರ ಮಹಾಸ್ವಾಮೀಜಿ ಹೇಳಿದರು.

ಶ್ರೀ ಗವಿಸಿದ್ಧೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಭಾರತೀಯ ರೆಡ್‌ಕ್ರಾಸ್ ಕೊಪ್ಪಳ ಶಾಖೆ, ಶ್ರೀ ಗವಿಸಿದ್ಧೇಶ್ವರ ಆಯುರ್ವೇದ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡಿದ್ದ ರಕ್ತದಾನ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜಾತ್ರೆಗಳಲ್ಲಿ ಇಂಥಹ ಕಾರ್ಯ ಮಾಡುತ್ತಿರುವುದು ಶ್ಲಾಘನೀಯ. ಈ ಕಾರ್ಯ ಕಳೆದ ಹತ್ತಾರು ವರ್ಷಗಳಿಂದ ನಿರಂತರವಾಗಿ ನಡೆದುಕೊಂಡು ಬಂದಿದೆ. ಪ್ರತಿ ವರ್ಷ ನೂರಾರು ಜನರು ರಕ್ತದಾನ ಮಾಡುತ್ತಾರೆ. ಅದು ಹಲವರ ಜೀವ ಉಳಿಸಲು ಕಾರಣವಾಗುತ್ತದೆ ಎಂದರು.

ಇಟಗಿಯ ಶ್ರೀ ಗುರುಶಾಂತವೀರ ಮಹಾಸ್ವಾಮೀಜಿ ಮಾತನಾಡಿ, ರಕ್ತದಾನ ಎಲ್ಲ ದಾನಕ್ಕಿಂತಲೂ ಶ್ರೇಷ್ಠ ಕಾರ್ಯವಾಗಿದೆ. ಅರ್ಹ ಪ್ರತಿಯೊಬ್ಬರೂ ರಕ್ತದಾನ ಮಾಡುವ ಮೂಲಕ ಜೀವ ಉಳಿಸುವ ಕಾರ್ಯದಲ್ಲಿ ತೊಡಗಬೇಕಾಗಿದೆ. ಇದರಿಂದ ಆರೋಗ್ಯವೂ ವೃದ್ಧಿಯಾಗುತ್ತದೆ ಎಂದರು.

ಅಭಿನವ ನಾಗಲಿಂಗ ಅವಧೂತರು, ಶ್ರೀ ಗುರುಸಿದ್ಧೇಶ್ವರ ಸ್ವಾಮೀಜಿ, ಶ್ರೀ ಬಸವಭೂಷಣ ಸ್ವಾಮೀಜಿ, ಶ್ರೀ ಯಶವಂತದೇವರು ಸ್ವಾಮೀಜಿ, ಶ್ರೀ ಬ್ರಹ್ಮಾನಂದ ಸ್ವಾಮಿಜಿಗಳು ಸಾನ್ನಿಧ್ಯ ವಹಿಸಿದ್ದರು.

ಭಾರತೀಯ ರೆಡ್‌ಕ್ರಾಸ್ ಸಂಸ್ಥೆಯ ರಾಜ್ಯ ಶಾಖೆಯ ಉಪಸಭಾಪತಿ ಡಾ. ಶ್ರೀನಿವಾಸ ಹ್ಯಾಟಿ, ಕೊಪ್ಪಳ ಶಾಖೆಯ ಸಭಾಪತಿ ಸೋಮರಡ್ಡಿ ಅಳವಂಡಿ, ಆಯುರ್ವೇದ ಕಾಲೇಜಿನ ಪ್ರಾಚಾರ್ಯರಾದ ಡಾ. ಮಹಾಂತೇಶ ಸಾಲಿಮಠ, ಉಪ ಸಭಾಪತಿಗಳಾದ ಡಾ. ಸಿ.ಎಸ್. ಕರಮುಡಿ, ಡಾ. ಮಂಜುನಾಥ, ನಿರ್ದೇಶಕರಾದ ಡಾ. ಶಿವನನಗೌಡ, ಡಾ. ಗವಿಸಿದ್ದನಗೌಡ, ರಾಜೇಶ ಯಾವಗಲ್, ಡಾ. ಸುರೇಶ ಹಕ್ಕಂಡಿ, ಡಾ. ಪರಮೇಶ್ವರ ಮೊದಲಾದವರು ಇದ್ದರು.

ಕನೇರಿ ಮಠದ 'ಸಿದ್ಧಗಿರಿ ನ್ಯಾಚುರಲ್ಸ್', 'ಅಗ್ನಿ ಕವಚ' ಮಾರಾಟ ಕೇಂದ್ರ ಉದ್ಘಾಟನೆ

# ಸ್ವದೇಶಿ ಉತ್ಪನ್ನಗಳನ್ನು ಬಳಸಿ



ಸ್ವದೇಶಿ ಉತ್ಪನ್ನಗಳ ಮುಖ್ಯಸ್ಥ ಸಂತೋಷ ಅಕ್ಕಿ ಮಾತನಾಡಿ, ಭಾರತೀಯ ನಿರ್ಮಿತ ನೈಸರ್ಗಿಕ ಉತ್ಪನ್ನಗಳನ್ನು ಬಳಸುವುದು ಆರೋಗ್ಯಕ್ಕೆ ಒಳ್ಳೆಯದು ಮತ್ತು ದಕ್ಷತೆ ಹೆಚ್ಚಾಗುತ್ತದೆ. ಇಲ್ಲಿರುವ ಅನೇಕ ದೇಸಿ ಉತ್ಪನ್ನಗಳು ರಾಸಾಯನಿಕ-ಬಣ್ಣ ಮುಕ್ತವಾಗಿವೆ. ಅಂತಹ ಸ್ಥಳೀಯ ಉತ್ಪನ್ನಗಳ ಮಾರಾಟ ಕೇಂದ್ರವನ್ನು ಗದಗ ನಗರದ (ಜಿಲ್ಲಾ ಕ್ರೀಡಾಂಗಣ) ಕ್ರೀಡಾ ಸಂಕೀರ್ಣದ ಅಂಗಡಿ ಸಂಖ್ಯೆ 2ರಲ್ಲಿ ತೆರೆಯಲಾಗಿದೆ ಎಂದರು.

■ವಿಜಯಸಾಕ್ಷಿ ಸುದ್ದಿ, ಗದಗ

ಇಂದಿನ ಯುವಕರು ಪಾಶ್ಚಿಮಾತ್ಯ ಸಂಸ್ಕೃತಿಯನ್ನು ಅಳವಡಿಸಿಕೊಳ್ಳುವ ಮೂಲಕ ತಮ್ಮ ಆರೋಗ್ಯ ಮತ್ತು ವೃತ್ತಿಜೀವನವನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ. ಅಲ್ಲದೆ, ಸ್ವದೇಶಿ ಮತ್ತು ನೈಸರ್ಗಿಕ ಧಾನ್ಯಗಳು, ನೈಸರ್ಗಿಕ ತರಕಾರಿಗಳಂತಹ ನೈಸರ್ಗಿಕ ಉತ್ಪನ್ನಗಳನ್ನು ಬಳಸಿಕೊಂಡು ಉತ್ತಮ ಸಂಸ್ಕೃತಿಯನ್ನು ಅಳವಡಿಸಿಕೊಳ್ಳುವುದು ವ್ಯಕ್ತಿಯ ಆರೋಗ್ಯವನ್ನು ಅಭಿವೃದ್ಧಿಪಡಿಸುತ್ತದೆ ಎಂದು ಜಗದ್ಗುರು ಶ್ರೀ ಸದಾಶಿವಾನಂದ ಮಹಾಸ್ವಾಮಿಗಳು ನುಡಿದರು. ಗದುಗಿನಲ್ಲಿ ಹೆಚ್ಚು ಬೇಡಿಕೆಯಿರುವ ದೇಶೀಯ ಉತ್ಪನ್ನಗಳ ಮಾರಾಟ ಕೇಂದ್ರ ಕನೇರಿ ಮಠದ 'ಸಿದ್ಧಗಿರಿ ನ್ಯಾಚುರಲ್ಸ್' ಮತ್ತು 'ಅಗ್ನಿ ಕವಚ' ಮಾರಾಟ ಕೇಂದ್ರವನ್ನು ಜಗದ್ಗುರು ಶ್ರೀ ಶಿವಾನಂದ ಬೃಹನ್ಮಠದ ದಿವ್ಯ ಸಾನ್ನಿಧ್ಯದಲ್ಲಿ ಉದ್ಘಾಟಿಸಿ ಶ್ರೀಗಳು ಮಾತನಾಡಿದರು.

ಮುಖ್ಯ ಅತಿಥಿ ಶರಣಬಸಪ್ಪ ಎಸ್.ಗುಡಿಮನಿ ಮಾತನಾಡಿ, ನೈಸರ್ಗಿಕ ಆಹಾರಗಳ ಅರಿವು ಮತ್ತು ಗ್ರಾಮೀಣ ಸಂಸ್ಕೃತಿಯನ್ನು ಅಳವಡಿಸಿಕೊಳ್ಳುವ ಮಹತ್ವದ ಬಗ್ಗೆ ತಿಳಿಸಿದರಲ್ಲದೆ, ಸ್ವದೇಶಿ ಉತ್ಪನ್ನಗಳ ಮಳಿಗೆ ಗದಗ ನಗರದ ಜನರಿಗೆ ತುಂಬಾ ಅಗತ್ಯವಾಗಿದೆ ಎಂದು ಹೇಳಿದರು.

ಆನಂದ ಯಲಮಲಿ ಮಾತನಾಡಿ, ಎಲ್ಲಾ ಮನೆಗಳು, ಶಾಲೆಗಳು, ಅಂಗಡಿಗಳು, ಕಚೇರಿಗಳು ಒಂದೇ ಅಗ್ನಿ ಸುರಕ್ಷತಾ ಚೆಂಡನ್ನು ಹೊಂದಿರಬೇಕು. ಇದು ತುಂಬಾ ಸುಲಭವಾಗಿ ಲಭ್ಯವಿರುತ್ತದೆ ಮತ್ತು ಕೈಗೆಟುಕುವಂತಿದೆ ಎಂದರು.

ಈ ಸಂದರ್ಭದಲ್ಲಿ, ಅಶೋಕ್ ಟಿ.ಅಕ್ಕಿ, ಎಂ.ಎಸ್. ಕರಿಗೌಡ, ಎಚ್.ಎನ್. ಕಾಳೆ, ಪ್ರಕಾಶ್ ಅಕ್ಕಿ, ರಾಜು ಕುರಡಗಿ, ಶಿವಲೀಲಾ ಅಕ್ಕಿ, ಅನಿಲ್ ಅಬ್ಬಿಗೇರಿ, ಶಶಿಧರ ದಿಂಡೂರ, ರಾಘವೇಂದ್ರ ಕೊಪ್ಪರ, ರಮೇಶ ಸಜ್ಜಗರ, ಡಾ. ಉಮೇಶ ಹಾದಿ, ಸಂಜಯ ಹಬೀಬ್, ವೀರೇಶ ಪ್ರಭು ಗದುಗಿನ, ಬಸವರಾಜ ನರೇಗಲ್, ಅರುಣ ಹುಲ್ಲೂರು, ಶಶಿಧರಗೌಡ ಕಳ್ಳಿ, ವಿನಾಯಕ ಹೊರಕೇರಿ, ಚಂದ್ರು ಕುರಿ, ರೋಹನ್ ಕುಂದನಹಳ್ಳಿ, ನವೀನ್ ಕುರ್ತಕೋಟಿ, ರಾಹುಲ್ ಸಂಕನ್ನವರ್, ಮಹೇಶ ಕಮ್ಮಾರ, ಸುನೀಲ್ ಕುರ್ತಕೋಟಿ, ಸುನೀಲ್, ರವಿ ಮಾನ್ವಿ ಮುಂತಾದವರಿದ್ದರು.

### ಗವಿಮಠದ ಆವರಣದಲ್ಲಿ ಆಹ್ವಾನಿತ ಪುರುಷ, ಮಹಿಳಾ ಕುಸ್ತಿ ಪಂದ್ಯಾವಳಿ

# ಕುಸ್ತಿಯಿಂದ ದೈಹಿಕ, ಮಾನಸಿಕ ಸಮತೋಲನ



ಮಹಿಳಾ ವಿಭಾಗದಲ್ಲಿ ಆಹ್ವಾನಿತ 8 ತಂಡಗಳಲ್ಲಿ ಪ್ರಥಮ ಪಂದ್ಯದಲ್ಲಿ ಗದಗನ ಐಶ್ವರ್ಯ ಪ್ರಥಮ, ದ್ವಿತೀಯ ಪಂದ್ಯದಲ್ಲಿ ಕುಕನೂರಿನ ಅರಿಫಾ ಪ್ರಥಮ, ತೃತೀಯ ಪಂದ್ಯದಲ್ಲಿ ಹೋಸಪೇಟೆಯ ಸಿಂಧೂ ಪ್ರಥಮ, ಚಥುರ್ತ ಪಂದ್ಯದಲ್ಲಿ ಹೊಸಪೇಟೆಯ ಕವಿತಾ ಪ್ರಥಮ, ಐದನೇ ಪಂದ್ಯದಲ್ಲಿ ಜಲಜಾಕ್ಷಿ ಪ್ರಥಮ, ಆರನೇ ಪಂದ್ಯದಲ್ಲಿ ಶಿವಮೊಗ್ಗಾದ ಸಾತಿಯಾ ಪ್ರಥಮ, ಏಳನೇ ಪಂದ್ಯದಲ್ಲಿ ಗದಗನ ವೈಷ್ಣವಿ ಪ್ರಥಮ, ಎಂಟನೇ ಪಂದ್ಯದಲ್ಲಿ ಕಂಪ್ಲಿಯ ಬಿಂದಿಯಾ ಪ್ರಥಮ ಪಡೆದರು.



**■ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ಶ್ರೀ ಗವಿಸಿದ್ದೇಶ್ವರ ಜಾತ್ರೆ ಕೇವಲ ಧಾರ್ಮಿಕ ಜಾತ್ರೆಯಾಗಿರದೇ ಹಲವು ಸಾಂಸ್ಕೃತಿಕ, ಸಾಮಾಜಿಕ ಮತ್ತು ಕ್ರೀಡೆಗಳನ್ನು ಆಯೋಜನೆ ಮಾಡುವುದರ ಮೂಲಕ ವಿದ್ಯಾರ್ಥಿಗಳಲ್ಲಿ, ಕ್ರೀಡಾಸಕ್ತರಲ್ಲಿ, ಜಾತ್ರೆಗೆ ಬಂದ ಭಕ್ತಾಧಿಗಳಲ್ಲಿ ಮನರಂಜನೆ ಒದಗಿಸುವ ಸೇವಾ ಕಾರ್ಯವನ್ನು ಮಾಡುತ್ತಿದೆ. ಈ ಹಿನ್ನೆಲೆಯಲ್ಲಿ ಮಂಗಳವಾರ ಗವಿಮಠದ ಆವರಣದಲ್ಲಿ ಆಹ್ವಾನಿತ ಪುರುಷ ಹಾಗೂ ಮಹಿಳಾ ಕುಸ್ತಿ ಪಂದ್ಯಾವಳಿಗಳನ್ನು ಏರ್ಪಡಿಸಲಾಗಿತ್ತು.

ಕುಸ್ತಿ ಪಂದ್ಯಾವಳಿಗಳನ್ನು ಉದ್ಘಾಟಿಸಿ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳಾದ ನಾಗವೇಣಿ ಮಾತನಾಡಿ, ಕುಸ್ತಿ ಕ್ರೀಡೆಯು ಪುರಾತನ ಕ್ರೀಡೆಯಾಗಿದ್ದು, ಇದು ಒಂದು ದೇಹದಾರ್ಡ್ಯ ಚಟುವಟಿಕೆಯಾಗಿದೆ. ಈ ಕ್ರೀಡೆಯು ಪ್ರತಿಯೊಬ್ಬ ವ್ಯಕ್ತಿಯಲ್ಲಿ ದೈಹಿಕ ಹಾಗೂ ಮಾನಸಿಕ ಸಮತೋಲನ ಬೆಳವಣಿಗೆಗೆ ಸಹಕಾರಿಯಾಗುವುದರ ಮೂಲಕ ಸದೃಢ ವ್ಯಕ್ತಿಯನ್ನಾಗಿ ನಿರ್ಮಾಣ ಮಾಡುವುದರಲ್ಲಿ ಪ್ರಮುಖ ಪಾತ್ರವನ್ನು ವಹಿಸುತ್ತವೆ ಎಂದು ಹೇಳಿದರು.

ಭಾಗವಹಿಸಿದ ಪುರುಷರ ವಿಭಾಗದಲ್ಲಿ ಆಹ್ವಾನಿತ 16 ತಂಡಗಳಲ್ಲಿ ಪ್ರಥಮ ಪಂದ್ಯದಲ್ಲಿ ಅಭಿ ಹನುಮನಹಳ್ಳಿ ಪ್ರಥಮ, ತಾಯಪ್ಪ ಹೊಸಪೇಟೆ ದ್ವಿತೀಯ, ದ್ವಿತೀಯ ಪಂದ್ಯದಲ್ಲಿ ಪ್ರಜ್ವಲ್ ಹಂಪಿಕಟ್ಟಿ ಪ್ರಥಮ, ಮೌಲಾ ಗಂಗಾವತಿ ದ್ವಿತೀಯ, ತೃತೀಯ ಪಂದ್ಯದಲ್ಲಿ ಪರಶುರಾಮ ಹೊಸಪೇಟೆ ಪ್ರಥಮ, ಮಹೇಂದ್ರ ಅಗ್ರಿಬೊಮ್ಮನಹಳ್ಳಿ ದ್ವಿತೀಯ, ಚಥುರ್ತ ಪಂದ್ಯದಲ್ಲಿ ಹರೀಶ್ ಹೊಸಪೇಟೆ ಪ್ರಥಮ, ಅಲ್ತಾಫ್ ಹಗರಿಬೊಮ್ಮನಹಳ್ಳಿ ದ್ವಿತೀಯ, ಐದನೇ ಪಂದ್ಯದಲ್ಲಿ ರಮೇಶ್ ಹೊಸಪೇಟೆ ಪ್ರಥಮ, ಎಚ್.ಬಿ. ಹಳ್ಳಿ ಇರ್ಫಾನ್ ದ್ವಿತೀಯ, ಆರನೇ ಪಂದ್ಯದಲ್ಲಿ ಇರ್ಫಾನ್ ಹೆಚ್.ಬಿ. ಹಳ್ಳಿ ಪ್ರಥಮ, ಕೀರ್ತಿ ಹೊಸಪೇಟೆ ದ್ವಿತೀಯ, ಏಳನೇ ಪಂದ್ಯದಲ್ಲಿ ಹುಲ್ಕಜ್ಜಿ ಎಚ್.ಬಿ. ಹಳ್ಳಿ ಪ್ರಥಮ, ಅಲ್ತಾಫ್ ಕೊಪ್ಪಳ ದ್ವಿತೀಯ, ಎಂಟನೇ ಪಂದ್ಯದಲ್ಲಿ ಗಂಗಾಧರ್ ಹೆಚ್.ಬಿ. ಹಳ್ಳಿ ಪ್ರಥಮ, ಸುರೇಶ್ ಬೆಳಗಾವಿ ದ್ವಿತೀಯ, ಒಂಬತ್ತನೇ ಪಂದ್ಯದಲ್ಲಿ ಸಚಿನ್ ಮೌಲಿ ಪ್ರಥಮ, ಮಹೇಶ್ ಶರಣಯ್ಯ ಗುಲ್ಬರ್ಗಾ ದ್ವಿತೀಯ, ಹತ್ತನೇ ಪಂದ್ಯದಲ್ಲಿ ಯೋಗೇಶ್ ಪೈ ಪ್ರಥಮ, ಶ್ರೀಕಾಂತ್ ದ್ವಿತೀಯ, ಹನ್ನೊಂದನೇ ಪಂದ್ಯದಲ್ಲಿ ಅಮರೇಶ್ ಗುಲ್ಬರ್ಗ ಪ್ರಥಮ, ಶ್ರೀ ಪವರ್ ದ್ವಿತೀಯ, ಹನ್ನರಡನೇ ಪಂದ್ಯದಲಿ ಹನುಮಂತ್ ಅರಸಿಕೆರೆ ಪ್ರಥಮ, ಮಂಜುನಾಥ್ ಹೊಸಪೇಟೆ ದ್ವಿತೀಯ, ಹದಿಮೂರನೇ ಪಂದ್ಯದಲ್ಲಿ ಕೆಂಚಪ್ಪ ಹರಪನಹಳ್ಳಿ ಪ್ರಥಮ, ಬಾಬುರಾವ್ ಕೊಲ್ಲಾಪುರ ದ್ವಿತೀಯ, ಹದಿನಾಲ್ಕನೇ ಪಂದ್ಯದಲ್ಲಿ ಬಸವರಾಜ ಪಾಟೀಲ್ ಪ್ರಥಮ, ಪಪ್ಪು ಕೊಲ್ಲಾಪುರ ದ್ವಿತೀಯ, ಹದಿನೈದನೇ ಪಂದ್ಯದಲ್ಲಿ ಹನುಮಂತ ಮರಿಯಮ್ಮನಹಳ್ಳಿ ಪ್ರಥಮ, ಬಾಲಾಜಿ ಪಾಟೀಲ್ ದಿತೀಯ, ಹದಿನಾರನೇ ಪಂದ್ಯದಲ್ಲಿ ಕಾರ್ತಿಕ್ ಕಾಟಿ ರಾಣೆಬೆನ್ನೂರು ಪ್ರಥಮ, ಸತೀಶ್ ಮಹಾರಾಷ್ಟ್ರ ದ್ವಿತೀಯ ಸ್ಥಾನ ಪಡೆದರು.

ಪಂದ್ಯಾವಳಿಯಲ್ಲಿ ದೈಹಿಕ ನಿರ್ದೇಶಕರಾದ ಜಯರಾಮ ಮರಡಿತೋಟದ, ಮಂಜುನಾಥ ಆರೆಂಟನೂರ, ಈಶಪ್ಪ ದೊಡ್ಡಮನಿ, ವಿನೋದ ಮುದಿಬಸನಗೌಡ್ರ, ದೈಹಿಕ ಶಿಕ್ಷಕರಾದ ರಾಜು ಮಗಿಮಾವಿನಹಳ್ಳಿ ಹಾಗೂ ರಾಜು ಎಸ್ ಭಾಗವಹಿಸಿದ್ದರು. ಪಂದ್ಯಗಳ ರೆಫರಿಯಾಗಿ ಸಣ್ಣದುರುಗಪ್ಪ ಹಾಗೂ ಈರಣ್ಣ ಈಮ್ಮಡಿಯವರ ಕಾರ್ಯನಿರ್ವಹಿಸಿದರು.

## ವಿದ್ಯಾರ್ಥಿಗಳಿಗೆ ಶಾಲಾ ಬ್ಯಾಗ್ ವಿತರಣೆ




**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸಮೀಪದ ಶಿಗ್ಲಿ ಗ್ರಾಮದಲ್ಲಿನ ಮೂರು ಸರಕಾರಿ ಪ್ರಾಥಮಿಕ ಶಾಲೆಗಳ ಸುಮಾರು 500 ವಿದ್ಯಾರ್ಥಿಗಳಿಗೆ ಬೆಂಗಳೂರು ನೋವೆಲ್ ಹೋಪ್ ಫೌಂಡೇಶನ್ ಸಿಎಸ್‌ಆರ್ 2 ಲಕ್ಷ ರೂ ಅನುದಾನದಲ್ಲಿ ಉಚಿತವಾಗಿ ಶಾಲಾ ಬ್ಯಾಗ್‌ಗಳನ್ನು ಮಂಗಳವಾರ ವಿತರಿಸಿದರು.

ಸಿಎಸ್‌ಆರ್‌ನ ಹಿರಿಯ ಕಾರ್ಯನಿರ್ವಾಹಕ ದೀಪಕ್ ಆರ್ ಮಕ್ಕಳಿಗೆ ಬ್ಯಾಗ್‌ಗಳನ್ನು ವಿತರಿಸಿ ಮಾತನಾಡಿ, ಗ್ರಾಮೀಣ ಪ್ರದೇಶಗಳಲ್ಲಿನ ಮಕ್ಕಳು ಸಾಕಷ್ಟು ಪ್ರತಿಭಾವಂತರಿರುತ್ತಾರೆ. ಆದರೆ ಸೌಲಭ್ಯಗಳ ಕೊರತೆ, ಆರ್ಥಿಕ ಪರಿಸ್ಥಿತಿಯ ಹಿನ್ನೆಲೆಯಲ್ಲಿ ಕಲಿಕೆಯಿಂದ ಹಿಂದುಳಿಯುವ ಸಾಧ್ಯತೆಗಳಿರುತ್ತವೆ. ಅಂತಹ ಬಡ ವಿದ್ಯಾರ್ಥಿಗಳಿಗೆ ಸಂಸ್ಥೆಯ ವತಿಯಿಂದ ಶಾಲಾ ಬ್ಯಾಗ್ ಸೇರಿದಂತೆ ಹಲವು ಯೋಜನೆಗಳ ಮೂಲಕ ಅವುಗಳನ್ನು ಮಕ್ಕಳಿಗೆ ತಲುಪಿಸುವ ಕಾರ್ಯವನ್ನು ಮಾಡುತ್ತಿದ್ದೇವೆ. ವಿದ್ಯಾರ್ಥಿಗಳು ಇಂತಹ ಸೌಲಭ್ಯಗಳನ್ನು ಪಡೆದು ಉತ್ತಮ ಸಾಧನೆ ಮಾಡಿ ಶಾಲೆಗೆ, ಪಾಲಕರಿಗೆ, ದೇಶಕ್ಕೆ ಕೀರ್ತಿ ತರಬೇಕು ಎಂದು ಹೇಳಿದರು.

ಎಸ್‌ಡಿಎಮ್‌ಸಿ ಅಧ್ಯಕ್ಷ ಮಂಜುನಾಥ ಬದಿ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಸಿಆರ್‌ಪಿ ಜ್ಯೋತಿ ಗಾಯಕವಾಡ, ನವೀನ್ ಅಂಗಡಿ, ನಾಗರಾಜ ಮಜ್ಜಿಗುಡ್ಡ, ಎನ್.ವಿ. ಕುಲಕರ್ಣಿ, ಆರ್.ಡಿ. ಘೋರ್ಪಡೆ, ಎಸ್.ಎನ್. ಅತ್ರಡಕರ, ಡಿ.ಬಿ. ಪಾಟೀಲ, ಎಮ್. ವಾಯ್. ಭೋವಿ ಮುಂತಾದವರಿದ್ದರು. ಎಸ್.ಬಿ. ಅಣ್ಣಿಗೇರಿ ಸ್ವಾಗತಿಸಿದರು. ತಿಪ್ಪನಾಯಕ ಎಲ್ ಪ್ರಾಸ್ತಾವಿಕವಾಗಿ ಮಾತನಾಡಿದರು. ದೀಪಾ ಭಸ್ಮೆ, ರೇಣುಕಾ ಅಣ್ಣಿಗೇರಿ, ಆರ್.ಡಿ. ಕಾಲಾಯಗಾರ ಕಾರ್ಯಕ್ರಮ ನಿರೂಪಿಸಿದರು.

## ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಕೊಡಿಸಿ

▶▶ಮೊದಲನೇ ಪುಟದಿಂದ

ಸಮಾಜದ ಬಂಧುಗಳು ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಬೇಕು. ಕಳೆದ ವರ್ಷ 52 ವಿದ್ಯಾರ್ಥಿಗಳಿಂದ ಆರಂಭಗೊಂಡ ಶಾಲೆ 2ನೇ ವರ್ಷಕ್ಕೆ 150ಕ್ಕೂ ಹೆಚ್ಚು ವಿದ್ಯಾರ್ಥಿಗಳನ್ನು ಹೊಂದಿದೆಯೆಂದರೆ ಪಬ್ಲಿಕ್ ಶಾಲೆಯ ಗುಣಮಟ್ಟದ ಶಿಕ್ಷಣ ಕಾರಣ. ಮುಖ್ಯವಾಗಿ ಇಂದಿನ ವಿಜ್ಞಾನ ವಸ್ತುಪ್ರದರ್ಶನ ಬೆಳದು ನಿಂತ ಶಾಲೆಗಳಿಗೆ ಸವಾಲ್ ಹಾಕುವಂತಿತ್ತು. ಅಷ್ಟರ ಮಟ್ಟಿಗೆ ನಮಗೆ ಖುಷಿ ತಂದಿದೆ ಎಂದ ಅವರು, ಶಾಲೆಯ ಬೆಳವಣಿಗೆಯಲ್ಲಿ ನಮ್ಮ ಮನೆತನ ಸದಾ ಇರಲಿದೆ ಎಂದರು.

ಬಾವಾಸಾಬ ಬೆಟಗೇರಿ ಅಧ್ಯಕ್ಷತೆ ವಹಿಸಿದ್ದರು. ಯೂಸುಫ್ ಇಟಗಿ, ಖಲೀಲ ರಾಮದುರ್ಗ, ಪೈಜಹ್ಮದ ಕಲಾದಗಿ, ಅಬ್ದುಲ್‌ಲತೀಫ್ ಖತೀಬ, ದಸ್ತಗೀರ ಗಡವಾಲೆ, ಇಮಾಮಸಾಬ ದರಗಾದ, ಬಾಷಾಸಾಬ ಚಿನ್ನೂರ, ಮಲೀಕ ಯಲಿಗಾರ, ಅಸ್ಲಾಂ ಕೊಪ್ಪಳ, ರಿಯಾಜ ಮುಲ್ಲಾ ಸೇರಿದಂತೆ ಅಂಜುಮನ್ ಕಮಿಟಿ ಪದಾಧಿಕಾರಿಗಳು ಹಾಗೂ ಶಿಕ್ಷಕರು ಉಪಸ್ಥಿತರಿದ್ದರು.

## ಜ. 15ರಂದು ಹರಜಾತ್ರಾ ಮಹೋತ್ಸವ

▶▶ಮೊದಲನೇ ಪುಟದಿಂದ

ನೇಮಕ ಮಾಡಲಾಗಿದೆ. ಜಿಲ್ಲೆಯ ಸಮಾಜ ಬಾಂಧವರು ಹರಜಾತ್ರೆಗೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಬೇಕು. ಪ್ರಸಕ್ತ ವರ್ಷದಿಂದ ಹರಿಹರ ಪೀಠದಿಂದ ವೀರರಾಣಿ ಕಿತ್ತೂರ ಚನ್ನಮ್ಮಳ ಹೆಸರಿನಲ್ಲಿ ಪ್ರಶಸ್ತಿ ಪ್ರದಾನ ಮಾಡಲು ತೀರ್ಮಾನಿಸಲಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಜಾತ್ರಾ ಮಹೋತ್ಸವದ ಆಮಂತ್ರಣ ಪತ್ರಿಕೆ ಹಾಗೂ 2026ರ ಸಾಲಿನ ಕ್ಯಾಲೆಂಡರ್ ಬಿಡುಗಡೆ ಮಾಡಲಾಯಿತು.

ಈ ವೇಳೆ ಅಖಿಲ ಕರ್ನಾಟಕ ವೀರಶೈವ ಪಂಚಮಸಾಲಿ ಸಮಾಜದ ರಾಜ್ಯಾಧ್ಯಕ್ಷ ಸೋಮನಗೌಡ ಪಾಟೀಲ, ವೀರಣ್ಣ ಕರಿಬಿಷ್ಟಿ, ಎಸ್.ವಿ. ಪಲ್ಲೇದ, ಬಸವರಾಜ ವೀರಾಪೂರ, ಮೋಹನ್ ಲಿಂಬೆಕಾಯಿ, ಎಫ್.ವ್ಹಿ. ಮರಿಗೌಡ್ರ, ವಸಂತ ಪಡಗದ, ಅಶೋಕ ಸಂಕಣ್ಣನವರ, ಮಂಜು ಮಾಗಡಿ, ಮೋಹನ್ ಮಾಳಶೆಟ್ಟಿ, ಅನಿಲ ಪಾಟೀಲ ಮುಂತಾದವರು ಉಪಸ್ಥಿತರಿದ್ದರು.

## ಬಸ್ ನಿಲ್ದಾಣದ ಸ್ವಚ್ಛತೆ




**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಹಸಿ ಹಾಗೂ ಒಣ ಕಸವನ್ನು ಬೇರ್ಪಡಿಸಿ ವಾಹನದಲ್ಲಿ ಹಾಕುವುದರ ಮೂಲಕ ಸ್ವಚ್ಛತೆಗೆ ಪಟ್ಟಣ ಪಂಚಾಯಿತಿಯೊಂದಿಗೆ ಕೈಜೋಡಿಸಬೇಕು ಎಂದು ಪ್ರಭಾರ ಆರೋಗ್ಯ ನಿರೀಕ್ಷಕ ರಕ್ಷತ ಎಲ್ ಹೇಳಿದರು.

ಪಟ್ಟಣದ ಶ್ರೀ ಹುಚ್ಚಿರೇಶ್ವರ ನಗರದ ಬಸ್ ನಿಲ್ದಾಣವನ್ನು ಸ್ವಚ್ಛಗೊಳಿಸುವ ಕಾರ್ಯಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಕಸವನ್ನು ಎಲ್ಲೆಂದರಲ್ಲಿ ಬಿಸಾಡುತ್ತಿರುವುದರಿಂದ ವಾತಾವರಣದಲ್ಲಿ ಅನೈರ್ಮಲ್ಯ ಉಂಟಾಗುತ್ತಿದ್ದು, ಸೊಳ್ಳೆಗಳ ಉತ್ಪತ್ತಿ ಹೆಚ್ಚಾಗಿ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಪ್ರತಿಯೊಬ್ಬರೂ ಈ ಬಗ್ಗೆ ಮನದಟ್ಟು ಮಾಡಿಕೊಂಡು ಮನೆಯಲ್ಲಿ ಸಂಗ್ರಹವಾದ ಕಸವನ್ನು ರಸ್ತೆ ಬದಿಯಲ್ಲಿ ಬಿಸಾಡದೆ ವಾರ್ಡ್‌ಗಳಿಗೆ ಬರುವ ವಾಹನದಲ್ಲಿ ಹಾಕಬೇಕು. ಇದರಿಂದ ಸ್ವಚ್ಛತೆ ಕಾಪಾಡಲು ಅನುಕೂಲವಾಗುತ್ತದೆ. ಪಟ್ಟಣದ ವಿವಿಧ ಸ್ಥಳಗಳನ್ನು ಬ್ಲಾಕ್ ಸ್ಪಾಟ್ ಎಂದು ಗುರುತಿಸಲಾಗಿದ್ದು, ಹಂತ ಹಂತವಾಗಿ ಆ ಸ್ಥಳಗಳನ್ನು ಸ್ವಚ್ಛಗೊಳಿಸುವ ಮೂಲಕ ಪಟ್ಟಣವನ್ನು ಕಸ ಮುಕ್ತ ಪಟ್ಟಣವನ್ನಾಗಿಸುವ ಉದ್ದೇಶ ಹೊಂದಲಾಗಿದೆ ಎಂದರು.

ಹುಚ್ಚಿರೇಶ್ವರ ನಗರದ ಬಸ್ ನಿಲ್ದಾಣವು ಸಂಪೂರ್ಣ ನಿರ್ಲಕ್ಷ್ಯಕ್ಕೊಳಗಾಗಿ ಕಸದ ತೊಟ್ಟಿಯಾಗಿ ಮಾರ್ಪಟ್ಟಿತ್ತು. ಸುತ್ತಲೂ ಜಾಲಿ ಕಂಟಿ ಬೆಳೆದು ಕಸ ಎಸೆಯುವ ಸ್ಥಳವಾಗಿ ಪರಿವರ್ತನೆಯಾಗಿತ್ತು. ಪ.ಪಂ ಸಿಬ್ಬಂದಿ ಮಂಗಳವಾರ ಬಸ್ ನಿಲ್ದಾಣ ಹಾಗೂ ಸುತ್ತಲಿನ ಪರಿಸರವನ್ನು ಸ್ವಚ್ಛಗೊಳಿಸಿ, ಕಸವನ್ನು ಎಸೆಯಬೇಡಿ, ಸ್ವಚ್ಚತೆಯನ್ನು ಕಾಪಾಡಿ, ಇಲ್ಲಿ ಕಸ ಹಾಕಿದರೆ 500 ದಂಡ ಎಂಬ ಗೋಡೆ ಬರಹಗಳನ್ನು ಬರೆಯುವ ಮೂಲಕ ಗಮನ ಸೆಳೆದರು.

ಈ ಸಂದರ್ಭದಲ್ಲಿ ಕಮ್ಯೂನಿಟಿ ಮೊಬಲೈಜರ್ ಪೂರ್ಣಿಮಾ ಹೊಸಮನಿ, ರೇಣುಕಾ ಕಳಕೊಣ್ಣವರ, ಪರಶುರಾಮ ನಡಲಕೇರಿ, ಆರೀಫ್ ಮಿರ್ಜಾ, ನಿಂಗನಗೌಡ ಲಕ್ಕನಗೌಡ್ರ, ಸೋಮನಾಥ ಸಂಗನಾಳಮಠ ಇದ್ದರು.

### ಪರಮ ತಪಸ್ವಿ ಲಿಂ.ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳ ಬೆಳ್ಳಿ ಪುತ್ಥಳಿ ಮೆರವಣಿಗೆ ಕಾರ್ಯಕ್ರಮದಲ್ಲಿ -ಶ್ರೀ ರಂಭಾಪುರಿ ಜಗದ್ಗುರುಗಳು

# ಮನುಷ್ಯನಿಗೆ ಧರ್ಮ ಪರಿಪಾಲನೆ ಮುಖ್ಯ



ಸಾನ್ನಿಧ್ಯ ವಹಿಸಿದ ಇಂದಿನ ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳು ತಮ್ಮ ಆಶೀರ್ವಚನದಲ್ಲಿ, ಸಂಪತ್ತಿನಿಂದ ಸಿಗುವ ಸುಖ ಸೌಕರ್ಯಗಳು ಬೇಕು.

ಅವುಗಳನ್ನು ಪಡೆಯಲು ಶ್ರಮ ಮತ್ತು ಸಾಧನೆ ಬೇಡವಾಗಿದೆ. ಅಧರ್ಮ ದಾರಿಯಲ್ಲಿ ನೂರು ಹೆಜ್ಜೆ ಹಾಕುವುದಕ್ಕಿಂತ ನ್ಯಾಯ ನೀತಿ ಧರ್ಮ ಮಾರ್ಗದಲ್ಲಿ ನಡೆದು ತೋರಿದ ಮಹಾತ್ಮರ ದಾರಿಯಲ್ಲಿ ನಡೆದರೆ ಒಳ್ಳೆಯದು.

ಲಿಂ.ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳ ಶಿವಯೋಗ ಸಾಧನೆ ಮಾಡಿದ ತಪಸ್ಸು ಮತ್ತು ಬೋಧಿಸಿದ ಚಿಂತನಗಳು ಎಂದೆಂದಿಗೂ ನಮ್ಮೆಲ್ಲರಿಗೂ ದಾರಿದೀಪವೆಂದರು.

**■ವಿಜಯಸಾಕ್ಷಿ ಸುದ್ದಿ, ಅಜ್ಜಂಪುರ**

ಮಾನವ ಜನಾಂಗಕ್ಕೆ ದೇವರು ಕೊಟ್ಟ ಕೊಡುಗೆ ಅಪಾರ. ನಿಂತ ನೆಲ, ಹರಿಯುವ ನೀರು, ತಿನ್ನುವ ಅನ್ನ, ಉಸಿರಾಡುವ ಗಾಳಿ ಇವೆಲ್ಲಾ ದೇವರ ಕೊಡುಗೆ. ಅನ್ನ-ನೀರಿನಷ್ಟೇ ಮನುಷ್ಯನಿಗೆ ಧರ್ಮ ಪರಿಪಾಲನೆಯ ಅವಶ್ಯಕತೆ ಇದೆ. ಮನುಷ್ಯ ಹಲವಾರು ವ್ಯಸನಗಳಿಗೆ ಈಡಾಗಿ ಸಂಕಷ್ಟಕ್ಕೀಡಾಗುತ್ತಿದ್ದಾನೆ. ದುರ್ವ್ಯಸನಗಳಿಂದ ಹಲವಾರು ಕುಟುಂಬಗಳು ಬೀದಿಗೆ ಬರುತ್ತಿವೆ. ವ್ಯಸನಮುಕ್ತ ಸಮಾಜ ನಿರ್ಮಾಣಕ್ಕಾಗಿ ಜನರಲ್ಲಿ ಜಾಗೃತಿ ಮತ್ತು ಧರ್ಮ ಪ್ರಜ್ಞೆ ಮೂಡಿಸುವ ಅಗತ್ಯವಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಮಂಗಳವಾರ ತಾಲೂಕಿನ ಬುಕ್ಕಾಂಬುಧಿ ಗ್ರಾಮದ ಪಂಪಾ ವಿರೂಪಾಕ್ಷೇಶ್ವರ ದೇವಸ್ಥಾನದಿಂದ ಬೆಟ್ಟದವರೆಗೆ ಪ್ರಾರಂಭಗೊಂಡ ಪರಮ ತಪಸ್ವಿ ಲಿಂ.ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳ ಬೆಳ್ಳಿ ಪುತ್ಥಳಿ ಮೆರವಣಿಗೆ ಸಂದರ್ಭದಲ್ಲಿ ಶ್ರೀ ಉಜ್ಜಯಿನಿ, ಶ್ರೀ ಕಾಶೀ ಜಗದ್ಗುರುಗಳವರು ಪಾಲ್ಗೊಂಡು ಪುಷ್ಪಾರ್ಚನೆಗೈದು ಚಾಲನೆಯಿತ್ತು ಲಿಖಿತ ಆಶೀರ್ವಚನ ನೀಡಿದರು.

ಮನುಷ್ಯ ಯಾವಾಗಲೂ ಸುಖಾಪೇಕ್ಷಿ. ಎಲ್ಲರೂ ಸುಖ ಬಯಸುವರೇ ವಿನಃ ಕಷ್ಟ ಯಾರಿಗೂ ಬೇಕಾಗಿಲ್ಲ. ಹೊರಗೆ ಬಡತನವಿದ್ದು, ಒಳಗೆ ಸಿರಿತನ ಇದ್ದರೆ ಬದುಕು ಬಲು ಸುಂದರ. ಹೊರಗೆ ಸಿರಿತನವಿದ್ದು ಒಳಗೆ ಬಡತನ ಇದ್ದರೆ ಬದುಕಿನ ಬಂಡಿ ಸುಗಮವಾಗಿ ಸಾಗದು. ಹೃದಯ ಶ್ರೀಮಂತಿಕೆಯಿಲ್ಲದೇ ಬುದ್ಧಿ ಶ್ರೀಮಂತಿಕೆ ಎಷ್ಟಿದ್ದರೂ ಪ್ರಯೋಜವಿಲ್ಲ. ನೀರು ಎರೆದವರಿಗೂ ಕಡಿಯ ಬಂದವರಿಗೂ ಭೇದ-ಭಾವ ಎಣಿಸದೇ ವೃಕ್ಷವು ನೆರಳು, ಹಣ್ಣು ಕೊಡುತ್ತದೆ. ಅದರಂತೆ ಮಹಾತ್ಮರು ಯಾರಿಗೂ ಕೆಡಕು ಬಯಸದೇ ಹಿತವನ್ನೇ ಬಯಸಿದ್ದಾರೆ ಎಂದರು.

ಸಾನ್ನಿಧ್ಯ ವಹಿಸಿದ ಶ್ರೀಮತ್ಕಾಶೀ ಡಾ.ಚಂದ್ರಶೇಖರ ಜಗದ್ಗುರುಗಳು ತಮ್ಮ ಆಶೀರ್ವಚನದಲ್ಲಿ, ಒಳ್ಳೆಯದು ಉಳಿಯಬೇಕಾದರೆ ಕೆಟ್ಟದ್ದರ ಜೊತೆ ಹೋರಾಟ ಅನಿವಾರ್ಯ. ಸತ್ಯಕ್ಕಿಂತ ದೊಡ್ಡ ಧರ್ಮ ಇನ್ನೊಂದಿಲ್ಲ. ಸತ್ಯ ಧರ್ಮದ ರಕ್ಷಾ ಕವಚ. ಸುಳ್ಳಿಗೆ ಸುಣ್ಣ-ಬಣ್ಣ ಹಚ್ಚಬಹುದು. ನೈಜ ಸತ್ಯಕ್ಕೆ ಅದ್ಯಾವುದರ ಅವಶ್ಯಕತೆಯಿಲ್ಲ. ಬದುಕಿನ ಯಶಸ್ವಿಗಾಗಿ ಲೌಕಿಕ ಜ್ಞಾನ ಹೇಗೆ ಅಗತ್ಯವೋ ಹಾಗೆಯೇ ನೊಂದ ಮನಕ್ಕೆ ಆಧ್ಯಾತ್ಮಿಕ ಜ್ಞಾನ ಅವಶ್ಯಕವಾಗಿದೆ ಎಂದರು.

ನೇತೃತ್ವ ವಹಿಸಿದ ಎಡೆಯೂರು ಕ್ಷೇತ್ರ ರೇಣುಕ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಸ್ನೇಹ, ಸಂತೃಪ್ತಿ ಮತ್ತು ಸಂತೋಷಗಳೇ ಜೀವನದ ನಿಜವಾದ ಐಶ್ವರ್ಯ. ದುರ್ಜನರ ಸಹವಾಸದಿಂದ ದೂರವಿದ್ದು ಸಜ್ಜನರ ಸಹವಾಸ ಮಾಡುವುದು ಶ್ರೇಯಸ್ಕರ ಎಂದರು.

ಇದೇ ಸಂದರ್ಭದಲ್ಲಿ ಶ್ರೀ ರಂಭಾಪುರಿ, ಶ್ರೀ ಉಜ್ಜಯಿನಿ, ಶ್ರೀ ಕಾಶೀ ಜಗದ್ಗುರುಗಳವರು ವ್ಯಸನಮುಕ್ತ ಸಮಾಜ ನಿರ್ಮಾಣಕ್ಕಾಗಿ ಜನರಲ್ಲಿ ಜಾಗೃತಿ ಮತ್ತು ಧರ್ಮ ಪ್ರಜ್ಞೆ ಮೂಡಿಸಬೇಕೆಂಬ ಸಂಕಲ್ಪದೊಂದಿಗೆ ಪಾದಯಾತ್ರೆ ನಡೆಸಿದರು. ಅಖಿಲ ಭಾರತ ಶಿವಾಚಾರ್ಯ ಸಂಸ್ಥೆ ಅಧ್ಯಕ್ಷ ಸಿಂದಗಿ ಡಾ. ಪ್ರಭು ಸಾರಂಗದೇವ ಶಿವಾಚಾರ್ಯರು, ಮುಕ್ತಿಮಂದಿರ ಕ್ಷೇತ್ರದ ವಿಮಲ ರೇಣುಕ ಶಿವಾಚಾರ್ಯರು, ಹುಲಿಕೆರೆ ವಿರೂಪಾಕ್ಷಲಿಂಗ ಶಿವಾಚಾರ್ಯರು ಸೇರಿದಂತೆ ಸಿದ್ಧರಬೆಟ್ಟ, ಹುಣಸಘಟ್ಟ, ನಂದೀಪುರ, ಮಳಲಿ, ಹಣ್ಣೆ, ಕೆ.ಬಿದರೆ, ಅಂಬಲದೇವರಹಳ್ಳಿ, ಬೀರೂರು ಮೊದಲಾದ ಶ್ರೀಗಳು ಉತ್ಸವದಲ್ಲಿ ಪಾಲ್ಗೊಂಡಿದ್ದರು.

### ಬಿ.ಜಿ. ಅಣ್ಣಿಗೇರಿ ಆಶ್ರಮದಲ್ಲಿ ಆಧ್ಯಾತ್ಮಿಕ-ಶೈಕ್ಷಣಿಕ ಚಿಂತನ ಮಾಲಿಕೆ

# ಶಿಕ್ಷಣ ಕ್ಷೇತ್ರದಲ್ಲಿ ಸ್ಪರ್ಧಾತ್ಮಕತೆ ಹೆಚ್ಚುತ್ತಿದೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಇಂದಿನ ಸ್ಪರ್ಧಾತ್ಮಕ ದಿನಗಳಲ್ಲಿ ವಿದ್ಯಾರ್ಥಿಗಳು ಸಾಕಷ್ಟು ಪರಿಶ್ರಮಪಟ್ಟು ಅಭ್ಯಾಸ ಮಾಡಿದರೆ ಮಾತ್ರ ಉತ್ತಮ ಭವಿಷ್ಯ ಕಂಡುಕೊಳ್ಳಲು ಸಾಧ್ಯ ಎಂದು ಗದಗ ಜಿಮ್ಸ್ ಆಸ್ಪತ್ರೆಯ ಚಿಕ್ಕಮಕ್ಕಳ ತಜ್ಞ ಡಾ. ಈರಣ್ಣ ಹಳೇಮನಿ ಹೇಳಿದರು.

ಅವರು ಸೋಮವಾರ ಗದುಗಿನ ಬಿ.ಜಿ. ಅಣ್ಣಿಗೇರಿ ಗುರುಗಳ ಆಶ್ರಮದಲ್ಲಿ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನ ಏರ್ಪಡಿಸಿದ್ದ 76ನೇ ಆಧ್ಯಾತ್ಮಿಕ ಮತ್ತು ಶೈಕ್ಷಣಿಕ ಚಿಂತನ ಮಾಲಿಕೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು.

ಶಿಕ್ಷಣ ಕ್ಷೇತ್ರದಲ್ಲಿ ಇಂದು ಸ್ಪರ್ಧಾತ್ಮಕತೆ ಹೆಚ್ಚುತ್ತಿದೆ. ಈ ಸ್ಪರ್ಧಾತ್ಮಕತೆಯಲ್ಲಿ ಪ್ರತಿಭೆಯನ್ನು ಗುರುತಿಸಲು ಸಾಧ್ಯವಾಗುವದು. ಆದರೆ ಶಿಕ್ಷಣದಲ್ಲಿ ವ್ಯವಹಾರಿಕತೆ ಹೆಚ್ಚುತ್ತಿರುವದು ವಿಷಾದದ ಸಂಗತಿ. ನಾವೆಲ್ಲ ಯುವಕರಾಗಿದ್ದಾಗ ಬಿ.ಜಿ. ಅಣ್ಣಿಗೇರಿ ಗುರುಗಳ ಈ ಆಶ್ರಮದಲ್ಲಿ ಉಚಿತ ಪಾಠ ಹೇಳಿಸಿಕೊಂಡು ಪರಿಶ್ರಮದಿಂದ ಅಭ್ಯಾಸ ಮಾಡಿದ್ದರ ಪರಿಣಾಮವಾಗಿ ಸಾವಿರಾರು ವಿದ್ಯಾರ್ಥಿಗಳು ಇಂದು ಉನ್ನತ ಸ್ಥಾನದಲ್ಲಿದ್ದಾರೆ ಎಂದರಲ್ಲದೆ, ಅಣ್ಣಿಗೇರಿ ಗುರುಗಳ ಪಾಠ ಬೋಧನೆಯ ವೈಖರಿಯನ್ನು ಬಣ್ಣಿಸಿ ಅಂತಹ ಗುರುಗಳು ನಮಗೆ ಲಭ್ಯವಾಗಿದ್ದು ನಮ್ಮೆಲ್ಲರ ಪುಣ್ಯ ಎಂದರು.

ಆಶ್ರಮವನ್ನು ಬಹಳಷ್ಟು ವ್ಯವಸ್ಥಿತವಾಗಿ ಮುನ್ನಡೆಸಿಕೊಂಡು ಬಂದಿರುವ ಸಮಿತಿಯವರ ಹಾಗೂ ಪ್ರತಿಭಾ ಪ್ರತಿಷ್ಠಾನದ ಪದಾಧಿಕಾರಿಗಳ ಕಾರ್ಯ ಅಭಿನಂದನೀಯ. ಇಲ್ಲಿ ಇಂದಿಗೂ ಉಚಿತ ಪಾಠಗಳನ್ನು ಅನುಭವಿ ಶಿಕ್ಷಕ-ಶಿಕ್ಷಕಿಯರು ಮುನ್ನಡೆಸಿಕೊಂಡು ಬಂದಿರುವದು ಶ್ಲಾಘನೀಯ ಎಂದು ಬಣ್ಣಿಸಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರತಿಭಾ ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಪಾಟೀಲ, ಆಶ್ರಮ ಮತ್ತು ಪ್ರತಿಷ್ಠಾನದ ಕಾರ್ಯಚಟುವಟಿಕೆಗಳನ್ನು ವಿವರಿಸಿ ಸರ್ವರ ಸಹಕಾರದಿಂದ ಪ್ರಗತಿ ಸಾಧಿಸಲು ಸಾಧ್ಯವಾಗಿದೆ ಎಂದರು.

ಸುಭಾಷ್‌ಚಂದ್ರ ಬೆಟ್ಟದೂರ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ರವಿ ದಂಡಿನ ಸಂದರ್ಭೋಚಿತವಾಗಿ ಮಾತನಾಡಿದರು. ಕೊನೆಗೆ ಮಂಜುಳಾ ತುಂಬುರಮಟ್ಟಿ ವಂದಿಸಿದರು. ಕಾರ್ಯಕ್ರಮದಲ್ಲಿ ಪ್ರತಿಷ್ಠಾನದ ಉಪಾಧ್ಯಕ್ಷ ಡಾ.ಬಸಯ್ಯ ಬೆಳ್ಳೆರಿಮಠ ಸಿದ್ದಣ್ಣ ಕವಲೂರ, ತೋಂಟೇಶ ವೀರಲಿಂಗಯ್ಯನಮಠ, ಬಸವರಾಜ ಬಿಂಗಿ, ರವಿ ದಂಡಿನ, ಶಿವಣ್ಣ ಕಟ್ಟಿ, ಗುರುರಾಜ ಅಣ್ಣಿಗೇರಿ, ಮಂಜುಳಾ ತುಂಬರಮಟ್ಟಿ ಹಾಗೂ ಆಶ್ರಮದ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಬ್ಯಾನರ್ ಗಲಾಟೆ ಕೇಸ್; ಮೃತನ ಕುಟುಂಬಕ್ಕೆ 25 ಲಕ್ಷ ಹಣ ಕೊಟ್ಟ ಸಚಿವ ಜಮೀರ್ ವಿರುದ್ಧ ದೂರು!



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು/ಬಳ್ಳಾರಿ

ಬಳ್ಳಾರಿಯಲ್ಲಿ ಬ್ಯಾನರ್ ಗಲಾಟೆಯಲ್ಲಿ ಮೃತ ಯುವಕನ ಕುಟುಂಬಕ್ಕೆ ಸಚಿವ ಜಮೀರ್ ಅಹ್ಮದ್ ಖಾನ್ 25 ಲಕ್ಷ ರೂ. ನಗದು ನೀಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಂಗಳೂರಿನಲ್ಲಿ ಆದಾಯ ತೆರಿಗೆ ಇಲಾಖೆಗೆ ದೂರು ನೀಡಲಾಗಿದೆ.

ಹಿಂದುಪರ ಕಾರ್ಯಕರ್ತ ತೇಜಸ್ ಗೌಡ ಅವರು ನೀಡಿರುವ ದೂರಿನಲ್ಲಿ, ಸಚಿವರು ನಗದು ನೀಡುವಾಗ ಭಾರತೀಯ ರಿಸರ್ವ್ ಬ್ಯಾಂಕ್ ನಿಯಮ ಉಲ್ಲಂಘನೆ ನಡೆದಿದೆ ಎಂದು ಆರೋಪಿಸಿದ್ದಾರೆ. ಹೀಗಾಗಿ ಈ ಹಣದ ಮೂಲ ಮತ್ತು ವಿತರಣೆಯನ್ನು ಪರಿಶೀಲಿಸಿ ಸೂಕ್ತ ತನಿಖೆ ನಡೆಸಿ ಕಾನೂನು ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳ ಗಮನಕ್ಕೆ ತಂದಿದ್ದಾರೆ.

25 ಲಕ್ಷ ರೂ. ಆರ್ಥಿಕ ನೆರವು ವಿತರಣೆ ನೀಡಿದ್ದ ಜಮೀರ್ ಬಳ್ಳಾರಿ ನಗರದಲ್ಲಿ ಇತ್ತೀಚೆಗೆ ನಡೆದ ಬ್ಯಾನರ್ ಕಟ್ಟುವ ವಿಚಾರದಲ್ಲಿ ನಡೆದ ಗಲಭೆಯಲ್ಲಿ ಗುಂಡೇಟಿಗೆ ಬಲಿಯಾದ ಕಾಂಗ್ರೆಸ್ ಕಾರ್ಯಕರ್ತ ರಾಜಶೇಖರ ಅವರ ಕುಟುಂಬಕ್ಕೆ ಬಳ್ಳಾರಿ ಉಸ್ತುವಾರಿ ಸಚಿವರೂ ಆಗಿರುವ ವಸತಿ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಜಮೀರ್ ಅಹಮದ್ ಖಾನ್ ಅವರು 25 ಲಕ್ಷ ರೂ. ಆರ್ಥಿಕ ನೆರವು ವಿತರಣೆ ಮಾಡಿದ್ದರು. ಜೊತೆಗೆ ಸುಸಜ್ಜಿತ ಮನೆಯನ್ನು ನಿರ್ಮಿಸಿಕೊಡುವುದಾಗಿಯೂ ಭರವಸೆ ನೀಡಿದ್ದರು. ಘಟನೆ ನಡೆದು ಎರಡು ದಿನಗಳ ಬಳಿಕ ಬಳ್ಳಾರಿಗೆ ಆಗಮಿಸಿದ ಜಮೀರ್ ಅಹಮದ್ ಖಾನ್ ಅವರು ನೇರವಾಗಿ, ಗಲಭೆಯಲ್ಲಿ ಮೃತಪಟ್ಟ ರಾಜಶೇಖರ್ ಅವರ ನಿವಾಸಕ್ಕೆ ಭೇಟಿ ನೀಡಿದ್ದರು. ಹುಸೇನ್ ನಗರದಲ್ಲಿರುವ ಮೃತರ ಮನೆಗೆ ತೆರಳಿದ ಸಚಿವರು, ಕುಟುಂಬಸ್ಥರಿಗೆ ಸಾಂತ್ವನ ಹೇಳಿದ್ದಲ್ಲದೆ, ತಮ್ಮ ವೈಯಕ್ತಿಕ ಖಾತೆಯಿಂದ 25 ಲಕ್ಷ ರೂಪಾಯಿಗಳ ಆರ್ಥಿಕ ನೆರವು ಹಸ್ತಾಂತರಿಸಿದ್ದರು.

### ಜಿಲ್ಲಾ ಮಟ್ಟದ ಬ್ಯಾಂಕುಗಳ ಸಲಹಾ ಸಮಿತಿ ಸಭೆಯಲ್ಲಿ ಸಂಸದ ಬಸವರಾಜ ಬೊಮ್ಮಾಯಿ

# ಬ್ಯಾಂಕುಗಳು ಜನಪರ ಚಿಂತನೆಯೊಂದಿಗೆ ಕಾರ್ಯನಿರ್ವಹಿಸಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಬ್ಯಾಂಕುಗಳು ಕೇವಲ ಹಣಕಾಸು ಸಂಸ್ಥೆಗಳಲ್ಲ, ಸಮಾಜದ ಆರ್ಥಿಕ ಚಲನೆಗೆ ದಿಕ್ಕು ತೋರಿಸುವ ಪ್ರಮುಖ ಸಂಸ್ಥೆಗಳಾಗಿವೆ. ಬ್ಯಾಂಕುಗಳಲ್ಲಿ ಇರುವ ಹಣ ಸಂಪೂರ್ಣವಾಗಿ ಸಾರ್ವಜನಿಕರದ್ದೇ ಆಗಿದ್ದು, ಆ ಹಣವನ್ನು ಸ್ಥಳೀಯವಾಗಿ ಸದ್ಬಳಕೆ ಮಾಡುವ ಮೂಲಕ ಪ್ರಾದೇಶಿಕ ಅಸಮತೋಲನ ನಿವಾರಣೆಗೆ ಸಹಕಾರ ನೀಡಬೇಕು ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಂಗಳವಾರ ನಡೆದ ಜಿಲ್ಲಾ ಮಟ್ಟದ ಬ್ಯಾಂಕುಗಳ ಸಲಹಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಸಂಗ್ರಹವಾಗುವ ಬ್ಯಾಂಕ್ ಹಣವನ್ನು ಇದೇ ಪ್ರದೇಶದ ಅಭಿವೃದ್ಧಿಗೆ ಬಳಸಬೇಕು. ಇದರಿಂದ ಉದ್ಯೋಗ ಸೃಷ್ಟಿ, ವ್ಯಾಪಾರ ವೃದ್ಧಿ ಹಾಗೂ ಗ್ರಾಮೀಣ ಆರ್ಥಿಕ ಬಲವರ್ಧನೆ ಸಾಧ್ಯವಾಗುತ್ತದೆ. ಈ ಮೂಲಕ ಪ್ರಾದೇಶಿಕ ಅಸಮತೋಲನವನ್ನು ನಿವಾರಿಸಬಹುದು ಎಂದು ಸಂಸದರು ಅಭಿಪ್ರಾಯಪಟ್ಟರು.




ರೈತರು, ಮಹಿಳೆಯರು, ಯುವ ಉದ್ಯಮಿಗಳು ಹಾಗೂ ಸಣ್ಣ ವ್ಯಾಪಾರಿಗಳಿಗೆ ಬ್ಯಾಂಕ್ ಸಾಲ ಸುಲಭವಾಗಿ ದೊರಕುವಂತೆ ಬೃಹತ್ ಮಟ್ಟದಲ್ಲಿ ಲೋನ್ ಮೇಳಗಳನ್ನು ಆಯೋಜಿಸಬೇಕು. ಸಾಲ ಅರ್ಜಿಗಳ ಪ್ರಕ್ರಿಯೆ ಸರಳವಾಗಿರಬೇಕು. ಅರ್ಹ ಫಲಾನುಭವಿಗಳಿಗೆ ಯಾವುದೇ ಅನಗತ್ಯ ಅಡೆತಡೆ ಆಗಬಾರದು ಎಂದು ಹೇಳಿದರು.

ಬಡತನ ನಿವಾರಣೆಯಲ್ಲಿ ಹೌಸಿಂಗ್ ಲೋನ್ ಮಹತ್ವದ ಪಾತ್ರ ವಹಿಸುತ್ತದೆ. ಸ್ವಂತ ಮನೆ ಹೊಂದುವ ಮೂಲಕ ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳ ಜೀವನಮಟ್ಟ ಸುಧಾರಿಸುತ್ತದೆ. ಈ ಹಿನ್ನೆಲೆಯಲ್ಲಿ ಗೃಹ ಸಾಲ ವಿತರಣೆಗೆ ಬ್ಯಾಂಕುಗಳು ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸಂಸದರು ಸಲಹೆ ನೀಡಿದರು.

ಬ್ಯಾಂಕುಗಳು ಕಚೇರಿಗಳಿಗೆ ಸೀಮಿತವಾಗದೆ ಜನರ ಬಳಿಗೆ ಹೋಗಬೇಕು. ಸಾಲ ಮಂಜೂರಾತಿಯಲ್ಲಿ ವಿಳಂಬವಾಗಬಾರದು. ಅರ್ಹರಿಗೆ ಯಾವುದೇ ಅಡಚಣೆ ಇಲ್ಲದೆ ಸಾಲ ಸೌಲಭ್ಯ ದೊರೆಯಬೇಕು ಎಂದು ಸಂಸದ ಬಸವರಾಜ ಬೊಮ್ಮಾಯಿ ತಿಳಿಸಿದರು.

ಲೀಡ್ ಬ್ಯಾಂಕ್ ಮ್ಯಾನೇಜರ್ ಸಂತೋಷ ಎಂ.ವಿ ಮಾತನಾಡಿ, ಜಿಲ್ಲೆಯಲ್ಲಿ 31-12-2025ರವರೆಗೆ ಲೀಡ್ ಬ್ಯಾಂಕ್‌ನ 183 ಶಾಖೆಗಳು ಕಾರ್ಯನಿರ್ವಹಿಸುತ್ತಿವೆ. ಸೆಪ್ಟೆಂಬರ್ 2025ರವರೆಗೆ ಜಿಲ್ಲೆಯ ಸಾಲ ಠೇವಣಿ ಅನುಪಾತ ಶೇ. 102.18ರಷ್ಟಾಗಿರುತ್ತದೆ. ಎಲ್ಲ ಬ್ಯಾಂಕಿನ ನಿಯಂತ್ರಣಾಧಿಕಾರಿಗಳು ಸಾಲ ಠೇವಣಿ ಅನುಪಾತವನ್ನು ಸುಧಾರಿಸಲು ಶಾಖೆಗಳಿಗೆ ನಿರ್ದೇಶನ ನೀಡಲಾಗಿದೆ ಎಂದರು.

ಜಿಲ್ಲೆಯ ಆರ್ಥಿಕ ಅಭಿವೃದ್ಧಿಗೆ ಬ್ಯಾಂಕುಗಳು ಪ್ರಮುಖ ಪಾತ್ರ ವಹಿಸಬೇಕು. ಸರ್ಕಾರದ ಜನಪರ ಯೋಜನೆಗಳ ಲಾಭ ಪ್ರತಿಯೊಬ್ಬ ಅರ್ಹ ವ್ಯಕ್ತಿಗೂ ತಲುಪುವಂತೆ ಬ್ಯಾಂಕುಗಳು ಕಾರ್ಯನಿರ್ವಹಿಸಬೇಕು. ಬ್ಯಾಂಕುಗಳು ಮಾನವೀಯತೆ, ಸಾಮಾಜಿಕ ಹೊಣೆಗಾರಿಕೆ ಹಾಗೂ ಜನಪರ ಚಿಂತನೆಯೊಂದಿಗೆ ಕಾರ್ಯನಿರ್ವಹಿಸಬೇಕು. ಲಾಭವೇ ಮುಖ್ಯ ಎಂಬ ಮನೋಭಾವವನ್ನು ಬಿಟ್ಟು, ಬ್ಯಾಂಕುಗಳು ಸ್ಥಾಪನೆಯಾದ ಮೂಲ ಉದ್ದೇಶವನ್ನು ಮೊದಲು ಈಡೇರಿಸಬೇಕು ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಸಭೆಯಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಸಾಲ ಯೋಜನೆಗಳಾದ ಪ್ರಧಾನಮಂತ್ರಿ ಮುದ್ರಾ ಯೋಜನೆ, ಉದ್ಯೋಗಿನಿ, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ದೇವರಾಜ ಅರಸ ಹಿಂದುಳಿದ ಅಭಿವೃದ್ಧಿ ನಿಗಮ, ಕೈಮಗ್ಗ ಮತ್ತು ಜವಳಿ ಇಲಾಖೆಯ, ಜಿ.ಪಂನ ಎನ್‌ಆರ್‌ಎಲ್‌ಎಂ (ಸ್ವ-ಸಹಾಯ ಗುಂಪು) ಪಿಎಂಎವೈ, ಸಾಮಾಜಿಕ ಭದ್ರತಾ ಪಿಂಚಣಿ ಯೋಜನೆ ಪಿಎಂಎಫ್‌ಬಿವೈ ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸಲಾಯಿತು.

ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ನಬಾರ್ಡದ ಎಜಿಎಂ ಮಯೂರ ಕಾಂಬ್ಳೆ, ಆರ್‌ಬಿಐ ಎಜಿಎಂ, ಸೂರಜ ಎಸ್, ಎಸ್‌ಬಿಐ ರೀಜನಲ್ ಮ್ಯಾನೇಜರ್ ನಾಗಸುಬ್ಬಾರೆಡ್ಡಿ, ವಿವಿಧ ಇಲಾಖೆಯ ಅಧಿಕಾರಿಗಳು, ಬ್ಯಾಂಕ್‌ನ ಅಧಿಕಾರಿಗಳು ಹಾಜರಿದ್ದರು.

## ಗದಗ ಜಿಲ್ಲಾ ಕ್ಲಾಥ್ ಮರ್ಚಂಟ್ಸ್ ಅಸೋಸಿಯೇಶನ್‌ದಿಂದ ಸಂಸದ ಬೊಮ್ಮಾಯಿ ಅವರಿಗೆ ಮನವಿ ಅರ್ಪಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಹೊರವಲಯದಲ್ಲಿರುವ ರೇಲ್ವೆ ಬೈಪಾಸ್ ನಿಲ್ದಾಣದಲ್ಲಿ ಸಕಲ ಮೂಲಭೂತ ಸೌಲಭ್ಯ ಆದ ನಂತರ ರೈಲು ನಿಲುಗಡೆ ಮಾಡಬೇಕೆಂದು ಆಗ್ರಹಿಸಿ ಗದಗ ಜಿಲ್ಲಾ ಕ್ಲಾಥ್ ಮರ್ಚಂಟ್ಸ್ ಅಸೋಸಿಯೇಶನ್ ವತಿಯಿಂದ ಸಂಸದ ಬಸವರಾಜ ಬೊಮ್ಮಾಯಿ ಅವರ ಮೂಲಕ ಕೇಂದ್ರ ರೇಲ್ವೆ ಸಚಿವರಿಗೆ ಮನವಿ ಸಲ್ಲಿಸಿದರು.

ಮಂಗಳವಾರ ಗದುಗಿಗೆ ಆಗಮಿಸಿದ್ದ ಸಂಸದ ಬಸವರಾಜ ಬೊಮ್ಮಾಯಿ ಅವರನ್ನು ಭೇಟಿ ಮಾಡಿದ ಅಸೋಸಿಯೇಶನ್‌ದ ಅಧ್ಯಕ್ಷ ಸುರೇಶ ಬನಸಾಲಿ ನೇತೃತ್ವದಲ್ಲಿ ಪದಾಧಿಕಾರಿಗಳು ಮನವಿ ಸಲ್ಲಿಸಿದರು.

ವ್ಯಾಪಾರಸ್ಥರು, ವೃದ್ಧರು, ಮಹಿಳೆಯರು, ಮಕ್ಕಳು ರೇಲ್ವೆ ಪ್ರವಾಸ ಕೈಗೊಂಡು ಗದುಗಿನ ಈ ರೇಲ್ವೆ ಬೈಪಾಸ್ ಸ್ಟೇಷನ್‌ದಲ್ಲಿ ಇಳಿಯುವದು, ಹತ್ತುವದನ್ನು ಮಾಡಲು ತೀವ್ರ ತೊಂದರೆ ಅನುಭವಿಸಬೇಕಾಗಿದೆ. ಬೈಪಾಸ್ ನಿಲ್ದಾಣದಲ್ಲಿ ಭದ್ರತೆ ಇಲ್ಲ, ಪೊಲೀಸ್ ಉಸ್ತುವಾರಿ ಇಲ್ಲ, ಬೈಪಾಸ್ ನಿಲ್ದಾಣದಿಂದ ಮಧ್ಯ ರಾತ್ರಿ ಗದಗ ಸಿಟಿಗೆ ಸಂಚರಿಸಲು ಬಸ್, ಅಟೋ ವ್ಯವಸ್ಥೆ ಇಲ್ಲ. ಆದ್ದರಿಂದ ಈ ಎಲ್ಲ ವ್ಯವಸ್ಥೆಯ ಬಳಿಕವೇ ಇಲ್ಲಿ ರೈಲು ನಿಲುಗಡೆ ಆಗಬೇಕು ಎಂದು ಮನವಿಯಲ್ಲಿ ವಿವರಿಸಿದರು.

ಮನವಿಗೆ ಸಕಾರಾತ್ಮಕವಾಗಿ ಸ್ಪಂದಿಸಿದ ಸಂಸದ ಬಸವರಾಜ ಬೊಮ್ಮಾಯಿ, ಮನವಿಯ ಗಂಭೀರತೆಯನ್ನು ಅರಿತು ಈ ಬಗ್ಗೆ ತಕ್ಷಣ ಕ್ರಮ ಕೈಗೊಳ್ಳುವಂತೆ ಸಂಬಂಧಿಸಿದವರ ಗಮನಕ್ಕೆ ತರುವ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಅಸೋಸಿಯೇಶನ್ ಕಾರ್ಯದರ್ಶಿ ಹೀರಾಚಂದ್ರ ಸೆಮ್ಲಾನಿ, ಖಜಾಂಚಿ ಮಹಾವೀರ ಸೋಳಂಕಿ, ಸುರೇಶ ಓಸ್ವಾಲ, ಹರೀಶ್ ಶಹಾ, ಸುರೇಶ ಕೋಠಾರಿ, ಪೃಥ್ವಿರಾಜ ಬನಸಾಲಿ, ಮದನಲಾಲ ಲುಂಕಡ, ಪ್ರವೀಣ ಸಂಕಲೇಚಾ, ಸ್ವರೂಪ ದೂಖಾ, ಧೀರಜ್ ಭಾಪಣಾ, ರಾಜೇಂದ್ರ ಸಂಘವಿ, ಮೋಹನ ಪವಾರ, ಮಹಾವೀರ ಸಂಕಲೇಚಾ, ರಾಜೇಂದ್ರ ಪಾಲರೇಚಾ, ಚೇಂಬರ್ ಅಧ್ಯಕ್ಷ ಶರಣಬಸಪ್ಪ ಗುಡಿಮನಿ, ರಾಜು ಕುರಡಗಿ ಮುಂತಾದವರಿದ್ದರು.

### ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ. 2ಕ್ಕೆ ದಾನಿಗಳಿಂದ ಕೊಡುಗೆ

# ಸರಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣವಿದೆ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸರಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ ದೊರೆ-ಯುತ್ತದೆ. ಪಾಲಕರು ಕೀಳರಿಮೆ ಬಿಟ್ಟು ಸರಕಾರಿ ಶಾಲೆಗೆ ಮಕ್ಕಳನ್ನು ಸೇರಿಸಬೇಕು ಎಂದು ಬೆಂಗಳೂರಿನ ಪ್ರತಿಬಿಂಬ ಟ್ರಸ್ಟ್ ಸದಸ್ಯ ಹನಮೇಶ ಯಾವಗಲ್ಲ ಹೇಳಿದರು.

ಅವರು ಪಟ್ಟಣದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ. 2ರಲ್ಲಿ ಪ್ರತಿಬಿಂಬ ಟ್ರಸ್ಟ್‌ನಿಂದ ಕ್ರೀಡಾ ಸಾಮಗ್ರಿಗಳನ್ನು ವಿತರಿಸಿ ಮಾತನಾಡುತ್ತಿದ್ದರು.

ಈಗಾಗಲೇ 100 ಸರಕಾರಿ ಶಾಲೆಗಳಿಗೆ ಅಗತ್ಯವಿರುವ ಪೀಠೋಪಕರಣ ನೀಡಲಾಗಿದ್ದು, ಉತ್ತರ ಕರ್ನಾಟಕ ಸರಕಾರಿ ಶಾಲೆಗಳಿಗೆ ಅಗತ್ಯವಿರುವ ಸೌಲಭ್ಯಗಳನ್ನು ನಮ್ಮ ಸಂಸ್ಥೆಯಿಂದ ನೀಡುತ್ತೇವೆ. ಸರಕಾರಿ ಶಾಲೆಯಲ್ಲಿ ಗುಣಮಟ್ಟದ ಶಿಕ್ಷಕ ವೃಂದ, ಸಾಕಷ್ಟು ಸರಕಾರದ ಸೌಲಭ್ಯಗಳಿದ್ದು, ಖಾಸಗಿ ಶಾಲೆಗಳ ವ್ಯಾಮೋಹ ಬಿಟ್ಟು ಉತ್ತಮ ಭವಿಷ್ಯಕ್ಕಾಗಿ ಮಕ್ಕಳನ್ನು ಸರಕಾರಿ ಶಾಲೆಗೆ ಸೇರಿಸಬೇಕು ಎಂದರು.



ಶಿವಾನಂದ ದಳವೆ ಮಾತನಾಡಿ, ಹೆತ್ತ ತಂದೆ-ತಾಯಿಗಳು, ಸಮಾಜದ, ಗುರುಗಳ ಋಣವನ್ನು ಎಂದೂ ತೀರಿಸಲು ಸಾಧ್ಯವಿಲ್ಲ. ನಮಗಾಗಿ ತಂದೆ ತಾಯಿಗಳು, ಗುರುಗಳು ಸಾಕಷ್ಟು ಶ್ರಮವಹಿಸಿದ ಪರಿಣಾಮವೇ ಇಂದು ನಾವು ಮನುಷ್ಯತ್ವದಿಂದ ಸಮಾಜದಲ್ಲಿ ಬಾಳುವಂತಾಗಿದೆ. ಇಂತವರ ಋಣವನ್ನು ಸ್ವಲ್ಪಾದರೂ ತಿರಿಸುವ ಸೌಭಾಗ್ಯ ನಮಗೆ ದೊರೆತಿದೆ ಎಂದರು.

ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ ಮಾತನಾಡಿ, ಈಗಾಗಲೇ ನಮ್ಮ ಗದಗ ಗ್ರಾಮೀಣ ಸರಕಾರಿ ಶಾಲೆಗಳಲ್ಲಿ ಸಾಕಷ್ಟು ದಾನಿಗಳ ಸಹಾಯ-ಸಹಕಾರದಿಂದ ಎಲ್ಲಾ ಸೌಲಭ್ಯಗಳನ್ನು ಹೊಂದಿದ್ದು, ಹಂತ ಹಂತವಾಗಿ ಎಲ್ಲಾ ಶಾಲೆಗಳನ್ನು ಅಭಿವೃದ್ಧಿಪಡಿಸಲಾಗುತ್ತಿದೆ ಎಂದರು.

ಪ್ರತಿಬಿಂಬ ಟ್ರಸ್ಟ್‌ನಿಂದ ಎಲ್‌ಇಡಿ ಟಿವ್ಹಿ, ಶಿವಾನಂದ ದಳವೆ ಇವರಿಂದ ಕ್ರೀಡಾ ಸಾಮಗ್ರಿ ಗ್ರೀನ್ ಬೋರ್ಡ್, ಮೌಲಾಸಾಬ ದೊಡ್ಡಮನಿ ಇವರಿಂದ ಶುದ್ಧ ನೀರಿನ ಘಟಕ, ಬಸವರಾಜ ಹಾರೋಗೇರಿ ಇವರಿಂದ ನೆಲಹಾಸು ವ್ಯವಸ್ಥೆ ಕೊಡಮಾಡಲಾಯಿತು.

ಅಧ್ಯಕ್ಷತೆಯನ್ನು ಎಸ್‌ಡಿಎಂಸಿ ಅಧ್ಯಕ್ಷ ರಮೇಶ ಹಾರೋಗೇರಿ ವಹಿಸಿದ್ದರು. ಶಾಲಾ ಪ್ರಧಾನ ಗುರು ಎ.ಸಿ. ಶ್ಯಾಗೋಟಿ, ಶಿವಾನಂದ ದಳವೆ, ಈಶ್ವರಯ್ಯ ಕಲ್ಯಾಣಮಠ, ಡಾ. ಎಸ್.ಸಿ. ಚವಡಿ, ಬಿ.ಜಿ. ಯಳವತ್ತಿ, ಬಿ.ಎಂ. ಹರಪನಹಳ್ಳಿ, ಶಂಕರ ಹಡಗಲಿ, ಜಗದೀಶ ಕುಲಕರ್ಣಿ, ಮಾಹಾದೇವಪ್ಪ ಗಡಾದ, ಬಸವರಾಜ ಹಾರೋಗೇರಿ, ಎಸ್.ಸಿ. ಬಡ್ನಿ, ಸುನಂದಾ ಮಡ್ಡಕಾರ, ಜಿ.ಜಿ. ಗುಡಿ. ಜಿ.ಎಂ. ಜವಳಿ, ಶಕುಂತಲಾ ಅಂಕದ, ಎಸ್.ಬಿ. ಆಲೂರ, ಎನ್.ಬಿ. ಪರ್ವತಗೌಡ್ರ, ಜ್ಯೋತಿ ಜಾಧಾವ ಇದ್ದರು.

ಮೌಲಾಸಾಬ ದೊಡ್ಡಮನಿ ಶುದ್ಧ ಕುಡಿಯುವ ನೀರಿನ ಘಟಕ ಸಮರ್ಪಿಸಿ ಮಾತನಾಡಿ, ಸರಕಾರಿ ಶಾಲೆಗಳು ನಮಗೆ ಎಲ್ಲವನ್ನೂ ಕಲಿಸಿವೆ.

ನಮಗೆ ಬದುಕು ರೂಪಿಸಿಕೊಟ್ಟ ತಂದೆ-ತಾಯಿ, ಗುರುಗಳ ಋಣವನ್ನು ತೀರಿಸುವ ಅವಕಾಶ ಸಿಕ್ಕಿದ್ದು ನಮ್ಮ ಭಾಗ್ಯ. ಸರಕಾರಿ ಶಾಲೆಗಳು ಅಭಿವೃದ್ಧಿ ಹೊಂದಬೇಕು, ಬಡ ಮಕ್ಕಳು ಉತ್ತಮ ಶಿಕ್ಷಣ ಪಡೆಯಬೇಕು ಎಂದರು.

### ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷರಿಂದ ಇನಾಂವೀರಾಪುರ ಗ್ರಾಮ ಭೇಟಿ

# ಮಾನವ ಹಕ್ಕುಗಳ ಉಲ್ಲಂಘನೆಯಾಗಬಾರದು




■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷ ಟಿ. ಶಾಮ್ ಭಟ್ ಅವರು ಮಂಗಳವಾರ ಇನಾಂವೀರಾಪುರ ಗ್ರಾಮಕ್ಕೆ ಭೇಟಿ ನೀಡಿ, ದಲಿತ ಕುಟುಂಬದ ಮೇಲೆ ಆಗಿರುವ ದೌರ್ಜನ್ಯ ಪ್ರಕರಣದ ಹಿನ್ನೆಲೆಯಲ್ಲಿ ವಾಸ್ತವಿಕ ಪರಿಸ್ಥಿತಿಯನ್ನು ಅವಲೋಕಿಸಿದರು.

ದಲಿತ ಕುಟುಂಬಗಳು ವಾಸಿಸುವ ಓಣಿ, ದೌರ್ಜನ್ಯಕ್ಕೆ ಒಳಗಾದ ವಿವೇಕಾನಂದ ಅವರ ಮನೆ, ಕೃತ್ಯ ನಡೆದ ಸ್ಥಳ ಪರಿಶೀಲಿಸಿ, ಸ್ಥಳೀಯ ನಿವಾಸಿಗಳಿಂದ, ಪೊಲೀಸ್ ಅಧಿಕಾರಿಗಳಿಂದ ಹಾಗೂ ಇತರರಿಂದ ವಿವರವಾದ ಮಾಹಿತಿಯನ್ನು ಅವರು ಪಡೆದುಕೊಂಡರು.

ಈ ಪ್ರಕರಣವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಲಾಗುತ್ತಿದ್ದು, ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಆಯೋಗದಿಂದ ಸರ್ಕಾರ ಹಾಗೂ ಸಂಬಂಧಪಟ್ಟ ಅಧಿಕಾರಿಗಳಿಗೆ ಶಿಫಾರಸ್ಸು ಮಾಡಲಾಗುವುದು ಮತ್ತು ಸಮಾಜದಲ್ಲಿ ಸಮಾನತೆ, ಸಹಬಾಳ್ವೆ ಮತ್ತು ಮಾನವೀಯ ಮೌಲ್ಯಗಳನ್ನು ಬಲಪಡಿಸಲು ಎಲ್ಲರೂ ಒಗ್ಗಟ್ಟಾಗಿ ಕೆಲಸ ಮಾಡಬೇಕು ಎಂದು ಟಿ. ಶಾಮ್ ಭಟ್ ಹೇಳಿದರು.

ಮಾನವ ಹಕ್ಕುಗಳ ಉಲ್ಲಂಘನೆಗಳಿಗೆ ಅವಕಾಶವಿಲ್ಲ ಎಂಬುದನ್ನು ಎಲ್ಲರೂ ಮನಗಂಡು, ಸಮಾಜದಲ್ಲಿ ಶಾಂತಿ ಮತ್ತು ಸೌಹಾರ್ದತೆಯನ್ನು ಕಾಪಾಡುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಇಂತಹ ದುರ್ಘಟನೆಗಳು ಮರುಕಳಿಸದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು. ದಲಿತ ಕುಟುಂಬಗಳಿಗೆ ಅಗತ್ಯ ಭದ್ರತೆ ಒದಗಿಸುವುದು, ಸರ್ಕಾರದ ವಿವಿಧ ಕಲ್ಯಾಣ ಯೋಜನೆಗಳ ಸದುಪಯೋಗ ದೊರಕುವಂತೆ ನೋಡಿಕೊಳ್ಳುವುದು ಹಾಗೂ ಘಟನೆಗೆ ಸಂಬಂಧಿಸಿದಂತೆ ಪಾರದರ್ಶಕ ಮತ್ತು ನಿಷ್ಪಕ್ಷಪಾತ ತನಿಖೆ ನಡೆಸಬೇಕು ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಮಾನವ ಹಕ್ಕುಗಳ ಆಯೋಗದ ಸದಸ್ಯ ಎಸ್.ಕೆ. ವಂಟಿಗೊಡಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ, ಡಿವೈಎಸ್‌ಪಿ ವಿನೋದ ಮುಕ್ತೆದಾರ, ತಹಸೀಲ್ದಾರ ಜಿ.ಆರ್. ಮಜ್ಜಗಿ, ಹುಬ್ಬಳ್ಳಿ ಗ್ರಾಮೀಣ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ಮುರಗೇಶ ಚನ್ನಣ್ಣನವರ, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕಿ ಪಿ. ಶುಭ, ಸಹಾಯಕ ನಿರ್ದೇಶಕಿ ಪ್ರಿಯದರ್ಶಿನಿ ಹಿರೇಮಠ, ತಾಲೂಕಾ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಅತೀಕಾ ಸಿದ್ದಿ, ವಿವಿಧ ಇಲಾಖೆಗಳ ಅಧಿಕಾರಿಗಳು, ವಿವೇಕಾನಂದ ದೊಡಮನಿ ಕುಟುಂಬದ ಸದಸ್ಯರು ಇದ್ದರು.

ಜಿಲ್ಲಾಧಿಕಾರಿ ದಿವ್ಯ ಪ್ರಭು ಮಾತನಾಡಿ, ಜಿಲ್ಲಾಡಳಿತದಿಂದ ಈಗಾಗಲೇ ಸರ್ಕಾರಕ್ಕೆ ಇನಾಂವೀರಾಪುರ ಗ್ರಾಮದ ಪ್ರಕರಣದ ಕುರಿತು ತನಿಖೆಗೆ ತ್ವರಿತ ನ್ಯಾಯಾಲಯ ಸ್ಥಾಪಿಸಲು, ದೌರ್ಜನ್ಯಕ್ಕೆ ಒಳಗಾದ ಕುಟುಂಬದ ಪರವಾಗಿ ವಿಶೇಷ ಅಭಿಯೋಜಕರನ್ನು ನೇಮಿಸಲು ಮತ್ತು ಸದರಿ ಕುಟುಂಬಕ್ಕೆ ವಿಶೇಷ ಪರಿಹಾರ ನೀಡುವ ಕುರಿತು ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. ಜಿಲ್ಲಾ ಉಸ್ತುವಾರಿ ಸಚಿವರಿಗೆ, ಸಮಾಜ ಕಲ್ಯಾಣ ಇಲಾಖೆಯ ಸಚಿವರಿಗೆ ಪ್ರಸ್ತಾವನೆ ಕುರಿತು ಸಂಪೂರ್ಣ ಮಾಹಿತಿಯನ್ನು ನೀಡಲಾಗಿದೆ ಎಂದು ಹೇಳಿದರು.

## ಶಾಸಕರಿಗೊಂದು, ಜನಸಾಮಾನ್ಯರಿಗೊಂದು ಕಾನೂನೇ?!

▶▶ಮೊದಲನೇ ಪುಟದಿಂದ

ಅಂಬೇಡ್ಕರ್ ಬರೆದ ಕಾನೂನಿಗೆ ಅವಮಾನ ಮಾಡಲಾಗುತ್ತಿದೆ ಎಂದರು.

ಜಗತ್ತಿಗೆ ರಾಮನನ್ನು ಸರಳವಾಗಿ ಪರಿಚಯಿಸಿದ ಮಹರ್ಷಿ ವಾಲ್ಮೀಕಿ ಹೆಸರಿನಲ್ಲಿ ಬಳ್ಳಾರಿಯಲ್ಲಿ ರಾಜಕಾರಣ ಮಾಡಲಾಗುತ್ತಿದೆ. ಶಾಸಕ ನಾರಾ ಭರತ್ ರೆಡ್ಡಿ ಹಾಗೂ ಸತೀಶ್ ರೆಡ್ಡಿ ಬೆಂಬಲಿಗರು ಬಳ್ಳಾರಿಯಲ್ಲಿ ವಯಕ್ತಿಕ ದ್ವೇಷ ಸಾಧಿಸುತ್ತಿದ್ದಾರೆ. ತಮ್ಮ ಶಾಸಕರನ್ನು ರಕ್ಷಿಸಲು ರಾಜ್ಯ ಸರ್ಕಾರ ಮುಂದಾಗಿದೆ. ಕೊಲೆಯಾದ ಯುವಕನ ಮೃತದೇಹವನ್ನು ಎರಡು ಬಾರಿ ಮರಣೋತ್ತರ ಪರೀಕ್ಷೆ ಮಾಡಲಾಗಿದೆ. ಪೊಲೀಸ್ ಇಲಾಖೆಯನ್ನು ರಾಜ್ಯ ಸರ್ಕಾರ ತನ್ನ ಕಪಿಮುಷ್ಠಿಯಲ್ಲಿ ಇಟ್ಟುಕೊಂಡು ಆಡಳಿತ ನಡೆಸುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಈ ವೇಳೆ ಕುಮಾರ ನಡಗೇರಿ, ಶಿವಯೋಗಿ ಹಿರೇಮಠ, ಈರಣ್ಣ ಪೂಜಾರ, ಪಿ.ಎಸ್. ಕಾಳೆ, ಸೋಮು ಗುಡಿ, ಹುಲಗಪ್ಪ ವಾಲ್ಮೀಕಿ, ಸುನೀಲ ಮುಳ್ಳಾಳ, ಸತೀಶ್ ಕುಂಬಾರ, ಹರೀಶ್ ಗೋಸಾವಿ, ವೆಂಕಟೇಶ್ ದೊಡ್ಡಮನಿ, ಕಿರಣ್ ಹಿರೇಮಠ ಉಪಸ್ಥಿತರಿದ್ದರು.

## ಉತ್ತರ ಪ್ರದೇಶ SIR : ಮತದಾರರ ಪಟ್ಟಿಯಿಂದ 2.89 ಕೋಟಿ ಹೆಸರು ಡಿಲೀಟ್

■ವಿಜಯಸಾಕ್ಷಿ ಸುದ್ದಿ, ಉತ್ತರ ಪ್ರದೇಶ

ರಾಜ್ಯದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐರ್) ಬಳಿಕ ಸುಮಾರು 2.89 ಕೋಟಿ ಮತದಾರರ ಹೆಸರುಗಳನ್ನು ಪಟ್ಟಿಯಿಂದ ತೆಗೆದುಹಾಕಲಾಗಿದೆ ಎಂದು ಉತ್ತರ ಪ್ರದೇಶದ ಮುಖ್ಯ ಚುನಾವಣಾ ಅಧಿಕಾರಿ (ಸಿಇಓ) ನವದೀಪ್ ರಿನ್ವಾ ಮಂಗಳವಾರ (ಜ.6) ತಿಳಿಸಿದ್ದಾರೆ.

ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ರಿನ್ವಾ, ಚುನಾವಣಾ ಆಯೋಗವು ಸುಮಾರು 12.5 ಕೋಟಿ ಎಸ್‌ಐಆರ್ ಅರ್ಜಿಗಳನ್ನು ಜನರಿಂದ ಸ್ವೀಕರಿಸಿದೆ ಎಂದು ಹೇಳಿದ್ದಾರೆ.

ವರದಿಗಳ ಪ್ರಕಾರ, ಎಸ್‌ಐಆರ್‌ಗೂ ಮೊದಲು ಉತ್ತರ ಪ್ರದೇಶದ ಮತದಾರರ ಒಟ್ಟು ಸಂಖ್ಯೆ 15.44 ಕೋಟಿ ಇತ್ತು. ಎಸ್‌ಐಆರ್ ವೇಳೆ 46.23 ಲಕ್ಷ ಜನರು ಮೃತಪಟ್ಟಿದ್ದಾರೆ, 1.27 ಕೋಟಿ ಜನರು ಶಾಶ್ವತವಾಗಿ ಸ್ಥಳಾಂತರಗೊಂಡಿದ್ದಾರೆ, 25.47 ಲಕ್ಷ ಮಂದಿಯ ಹೆಸರು ಒಂದಕ್ಕಿಂತ ಹೆಚ್ಚು ಬಾರಿ ಇದೆ ಮತ್ತು ಪತ್ತೆಯಾಗದವರು ಹಾಗೂ ಇತರೆ ಕಾರಣಗಳನ್ನು ನೀಡಿ 2.89 ಕೋಟಿ ಹೆಸರುಗಳನ್ನು ಕೈ ಬಿಡಲಾಗಿದೆ. ಇದರಿಂದ ಎಸ್‌ಐಆರ್ ಬಳಿಕ ಪ್ರಕಟಿಸಿ ಕರಡು ಮತದಾರರ ಪಟ್ಟಿಯಲ್ಲಿ ಒಟ್ಟು ಮತದಾರರ ಸಂಖ್ಯೆ 12.5 ಕೋಟಿಗೆ ಕುಸಿತಗೊಂಡಿದೆ.

ಸಿಇಓ ಪ್ರಕಾರ, 15.44 ಕೋಟಿ ಮತದಾರರಲ್ಲಿ, 12.55 ಕೋಟಿ ಮತದಾರರ (ಶೇಕಡ 81.30) ಹೆಸರುಗಳನ್ನು ಎಸ್‌ಐಆರ್ ನಂತರ ಕರಡು ಮತದಾರರ ಪಟ್ಟಿಯಲ್ಲಿ ಉಳಿಸಿಕೊಳ್ಳಲಾಗಿದೆ.

ಎಸ್‌ಐಆರ್ ಪೂರ್ಣಗೊಂಡ ಬಳಿಕ ಅಂತಿಮ ಮತದಾರರ ಪಟ್ಟಿಯನ್ನು ಮಾರ್ಚ್ 6,2026 ರಂದು ಬಿಡುಗಡೆ ಮಾಡಲಾಗುವುದು ಎಂದು ರಿನ್ವಾ ಹೇಳಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka